# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 51 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 06–09–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 51 | RNI No: KARKAN/2023/88462 | Chitradurga | Date: 06-09-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜಿಲ್ಲೆಯಲ್ಲಿ 135 ಕಿ.ಮೀ. ಮಾನವ ಸರಪಳಿ ಯಶಸ್ವಿಗೆ ಸಿದ್ಧತೆ ಪ್ರಾರಂಭ: ಡಿಸಿ 2

ರೈತ–ಶಿಕ್ಷಕ–ಸೈನಿಕ ದೇಶದ ನಿರ್ಮಾತೃಗಳು: ಸಿದ್ದರಾಮಯ್ಯ 3

ಅಮ್ಯೂಸ್‌ಮೆಂಟ್ ಪಾರ್ಕ್‌ಗೆ ಅನುಮತಿ ವಿರೋಧಿಸಿ ಜಿಲ್ಲಾಧಿಕಾರಿಗೆ ಮನವಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಬೆಳೆ ಹಾನಿ ರೈತರ ಪಟ್ಟಿ ಪ್ರಕಟ : ಆಕ್ಷೇಪಣೆ ಸಲ್ಲಿಕೆಗೆ 7 ದಿನಗಳ ಅವಕಾಶ; ಜಿಲ್ಲಾಧಿಕಾರಿ ಟಿ.ವೆಂಕಟೇಶ್

» **ಚಿತ್ರದುರ್ಗ**

ಜಿಲ್ಲೆಯಲ್ಲಿ 2024–25 ಸಾಲಿನಲ್ಲಿ ನೈಸರ್ಗಿಕ ವಿಕೋಪಗಳಾದ ಪ್ರವಾಹ ಅತೀವೃಷ್ಟಿಯಿಂದ ಉಂಟಾದ ಬೆಳೆ ಹಾನಿ ಕುರಿತಂತೆ ರೈತವಾರು ಪಟ್ಟಿ ಪ್ರಕಟಿಸಲಾಗಿದೆ. ಕೃಷಿ ಬೆಳೆಗಳ ಪೈಕಿ ಚಳ್ಳಕೆರೆ ತಾಲ್ಲೂಕಿನ 189.76 ಹೆಕ್ಟೇರ್, ಚಿತ್ರದುರ್ಗ ತಾಲ್ಲೂಕಿನ 366.06 ಹೆಕ್ಟೇರ್ ಸೇರಿ ಒಟ್ಟು 555.82 ಹೆಕ್ಟೇರ್ ಹಾಗೂ ತೋಟಗಾರಿಕೆ ಬೆಳೆಗಳ ಪೈಕಿ ಚಿತ್ರದುರ್ಗ ತಾಲ್ಲೂಕಿನ 335.50 ಹೆಕ್ಟೇರ್, ಚಳ್ಳಕೆರೆ ತಾಲ್ಲೂಕಿನ 33.77 ಹೆಕ್ಟೇರ್, ಹಿರಿಯೂರು ತಾಲ್ಲೂಕಿನ 30.90 ಹೆಕ್ಟೇರ್ ಮತ್ತು ಮೊಳಕಾಲೂರು ತಾಲ್ಲೂಕಿನ 3.13 ಹೆಕ್ಟೇರ್ ಸೇರಿ ಒಟ್ಟು 409.30 ಹೆಕ್ಟೇರ್ ಬೆಳೆ ನಷ್ಟ ಉಂಟಾಗಿದೆ. ಈ ಕುರಿತು ಜಂಟಿ ಪರಿಶೀಲನಾ ವರದಿಯಂತೆ ಬೆಳೆ ಹಾನಿಯಾದ ರೈತರ ಪಟ್ಟಿಯನ್ನು ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ, ತಹಶೀಲ್ದಾರ್, ಗ್ರಾಮ ಪಂಚಾಯತ್ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಬುಧವಾರ ಪ್ರಕಟಿಸಲಾಗಿದೆ. ಈ ಕುರಿತು ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ಸಂಬಂಧಿಸಿದ ತಹಶೀಲ್ದಾರ್, ಕೃಷಿ, ತೋಟಗಾರಿಕಾ ಇಲಾಖೆಗಳ ತಾಲ್ಲೂಕು ಕಛೇರಿಗಳಲ್ಲಿ 07 ದಿನಗಳೊಳಗಾಗಿ ಸಲ್ಲಿಸಬಹುದು. ಯಾವುದೇ ಆಕ್ಷೇಪಣೆ ಸಲ್ಲಿಕೆಯಾಗದಿದ್ದರೆ ಪಟ್ಟಿಯನ್ನು ಅಂತಿಮಗೊಳಿಸಿ ನಿಯಮಾನುಸಾರ ಪರಿಹಾರ ಪಾವತಿಗೆ ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಾಮಾಜಿಕ ಭದ್ರತಾ ಯೋಜನೆ ಫಲಾನುಭವಿಗಳು ಎನ್‌ಪಿಸಿಐ ಮ್ಯಾಪಿಂಗ್ ಮಾಡಿಸಲು ಸೂಚನೆ

» **ಚಿತ್ರದುರ್ಗ**

ವಿವಿಧ ಸಾಮಾಜಿಕ ಭದ್ರತೆ ಯೋಜನೆಗಳಡಿ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳ ಅಂಚೆ, ಬ್ಯಾಂಕ್ ಖಾತೆಗೆ ಆಧಾರ್ ಮತ್ತು ಎನ್‌ಪಿಸಿಐ ಮ್ಯಾಪಿಂಗ್ ಮಾಡುವಂತೆ ಸೂಚಿಸಿದೆ. ವಿವಿಧ ಸಾಮಾಜಿಕ ಭದ್ರತೆ ಯೋಜನೆಗಳಡಿ ಹಾಲಿ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳಿಗೆ ಮಾಸಾಶನ ಮೊತ್ತವನ್ನು ಪ್ರತಿ ಮಾಹೆ ವಿಳಂಬವಾಗದಂತೆ ಸಕಾಲದಲ್ಲಿ ಫಲಾನುಭವಿಗಳಿಗೆ ಅನುಕೂಲಕರವಾದ ಅಂಚೆ, ಬ್ಯಾಂಕ್ ಖಾತೆಗೆ 2023ರ ಡಿಸೆಂಬರ್ ಮಾಹೆಯಿಂದ ನೇರ ಹಣ ಸಂದಾಯ ಮೂಲಕ ಜಮಾ ಮಾಡಲಾಗುತ್ತಿದೆ. ಪ್ರಯುಕ್ತ ಈ ಯೋಜನೆಗಳಡಿ ಫಲಾನುಭವಿಗಳಿಗೆ ಮಾಸಾಶನ ಮೊತ್ತವನ್ನು ಡಿಸೆಂಬರ್ 2023ರ ಮಾಹೆಯಿಂದ ಆಧಾರ್ ಮತ್ತು ಎನ್‌ಪಿಸಿಐ ಮ್ಯಾಪಿಂಗ್ ಆದಂತಹ ಬ್ಯಾಂಕ್, ಅಂಚೆ ಖಾತೆಗಳಿಗೆ ನೇರವಾಗಿ ಜಮಾ ಮಾಡಲಾಗುತ್ತಿದ್ದು, ಕಳೆದ 2–3 ತಿಂಗಳಿಂದ ಮಾಸಾಶನ ಪಡೆಯದಂತಹ ಫಲಾನುಭವಿಗಳು ನೇರವಾಗಿ ಇತ್ತೀಚಿನ ಆಧಾರ್ ಕಾರ್ಡ್ ಮತ್ತು ಎನ್‌ಪಿಸಿಐ ಮ್ಯಾಪಿಂಗ್ ಆದಂತಹ ಅಂಚೆ, ಬ್ಯಾಂಕ್ ಪುಸ್ತಕದೊಂದಿಗೆ ಸಂಬಂಧಿಸಿದ ನಾಡಕಛೇರಿಯ ಉಪತಹಶೀಲ್ದಾರ್ ಅಥವಾ ತಹಶೀಲ್ದಾರ್‌ಗಳನ್ನು ತಪ್ಪದೆ ಸಂಪರ್ಕಿಸಿ, ಸರ್ಕಾರದ ಸೌಲಭ್ಯದ ಸದುಪಯೋಗ ಪಡೆಯಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಸೂಜಿಮಲ್ಲೇಶ್ವರನಗರ: ಹಾಡುಹಗಲೇ ಮಟ್ಕಾ ಚೀಟಿ ಬರೆಯುತ್ತಿದ್ದ ವ್ಯಕ್ತಿ ವಶ

» **ಚಳ್ಳಕೆರೆ**

ನಗರದ ಬಳ್ಳಾರಿ ರಸ್ತೆಯ ಮಾರುತಿ ಶೋರೂಂನ ಸಾರ್ವಜನಿಕ ಸ್ಥಳದಲ್ಲಿ ಗುರುವಾರ ಮಧ್ಯಾಹ್ನ ಸೂಜಿಮಲ್ಲೇಶ್ವರನಗರದ ಹೊನ್ನಪ್ಪ(36) ಎಂಬ ವ್ಯಕ್ತಿ ಮಟ್ಕಾ ಚೀಟಿ ಬರೆಯುತ್ತಿದ್ದ ಹಿನ್ನೆಲೆಯಲ್ಲಿ ಪೊಲೀಸರು ಆತನನ್ನು ವಶಕ್ಕೆ ಪಡೆದು ಮಟ್ಕಾ ಚೀಟಿ ಹಣ 2220ರೂಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಎಎಸ್‌ಐ ನಾಗೇಂದ್ರಪ್ಪ, ಪಿಸಿ ಶಂಕರಣ್ಣ ಇತರರು ದಾಳಿಯಲ್ಲಿ ಭಾಗವಹಿಸಿದ್ದರು.

### ಶಿಕ್ಷಕರ ದಿನಾಚರಣೆಯಲ್ಲಿ ಸಚಿವರ ಸಲಹೆ

# ಶಿಕ್ಷಕರು ವೃತ್ತಿಯಲ್ಲಿ ಆದರ್ಶ, ಬದ್ಧತೆ ಹಾಗೂ ತಲ್ಲೀನತೆ ಅಳವಡಿಸಿಕೊಳ್ಳಿ: ಡಿ.ಸುಧಾಕರ್

» **ಚಿತ್ರದುರ್ಗ**

ಶಿಕ್ಷಕರು ವೃತ್ತಿಯಲ್ಲಿ ಆದರ್ಶ, ಬದ್ಧತೆ ಹಾಗೂ ತಲ್ಲೀನತೆ ಅಳವಡಿಕೊಳ್ಳಬೇಕು ಎಂದು ಯೋಜನೆ ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸಲಹೆ ನೀಡಿದರು.



ಡಾ.ಸರ್ವೆಪಲ್ಲಿ ರಾಧಾಕೃಷ್ಣನ್ ಜನ್ಮದಿನಾಚರಣೆ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾಪಂಚಾತಿ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ, ಗುರುವಾರ ನಗರದ ತರಾಸು ರಂಗಮಂದಿರದಲ್ಲಿ ಆಯೋಜಿಸಲಾದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕ ಸ್ಥಾನಕ್ಕೆ ಬೆಲೆ ಕಟ್ಟಲಾಗದು. ಸ್ವತಃ ನಾನು ಪದವಿ ಶಿಕ್ಷಣ ಪೂರೈಸಿದ್ದೇನೆ ಎಂದರೆ ಅದಕ್ಕೆ ಕಾರಣ ಚಿಕ್ಕಂದಿನಲ್ಲಿ ನನಗೆ ಪಾಠ ಹೇಳಿದ ಶಿಕ್ಷಕರು. ನಾನು ಜೀವನದಲ್ಲಿ ಶಿಸ್ತು, ಬದ್ಧತೆ ರೂಡಿಸಿಕೊಳ್ಳುವುದನ್ನು ಶಿಕ್ಷಕರು ಕಲಿಸಿದರು. ದೇಶ ಹಾಗೂ ರಾಜ್ಯದಲ್ಲಿ ಸರ್ಕಾರಗಳು ಸಾವಿರಾರು ಕೋಟಿ ಹಣವನ್ನು ಶಿಕ್ಷಣದ ಮೇಲೆ ಖರ್ಚು ಮಾಡುತ್ತಿವೆ. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ನವರು ಶಿಕ್ಷಕರ ಬೇಡಿಕೆಗಳಿಗೆ ತಕ್ಷಣ ಸ್ಪಂದಿಸುತ್ತಿದ್ದಾರೆ. ರಾಜ್ಯದಲ್ಲಿ 7ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಜಾರಿ ಮಾಡಲಾಗಿದೆ. 2017ಕ್ಕಿಂತ ಮೊದಲು ಪ್ರಾಥಮಿಕ ಶಾಲೆಗಳಿಗೆ ನೇಮಕವಾದ ಶಿಕ್ಷಕರ ಬಡ್ತಿ ಸಮಸ್ಯೆ ಹಾಗೂ ಇತರೆ ಬೇಡಿಕೆಗಳಿಗೆ ಪರಿಹಾರ ದೊರಕಿಸಲು ಸಮಿತಿ ರಚಿಸುವ ಭರವಸೆ ನೀಡಿದ್ದಾರೆ ಎಂದು ಸಚಿವ ಡಿ.ಸುಧಾಕರ್ ಹೇಳಿದರು.

**ಫಲಿತಾಂಶ ಸುಧಾರಣೆಗೆ ತಾಕೀತು :** ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಚಿತ್ರದುರ್ಗ ಜಿಲ್ಲೆ 21ನೇ ಸ್ಥಾನಕ್ಕೆ ಕುಸಿದಿದೆ. ಇದು ಗಾಬರಿ ತರುವ ವಿಷಯವಾಗಿದೆ. ಜಿಲ್ಲೆ ಬರಗಾಲ ಪೀಡಿತ ಪ್ರದೇಶವಾಗಿದೆ. ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗದ ಜನರ ಸಂಖ್ಯೆ ಹೆಚ್ಚಿದೆ. ಇವರಿಗೆ ಶಿಕ್ಷಣ ಹೊರತು ಬೇರೆ ಅವಕಾಶವಿಲ್ಲ, ಶಿಕ್ಷಿತರಾದರೆ ಮಾತ್ರ ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಮುಂದೆ ಬರಲು ಅವಕಾಶ ದೊರಕುತ್ತದೆ.ಜಿಲ್ಲೆಯ ಮಕ್ಕಳ ಭವಿಷ್ಯ ಶಿಕ್ಷಕರ ಕೈಯಲ್ಲಿದೆ. ಮಕ್ಕಳನ್ನು ಮುಖ್ಯವಾಹಿನಿಗೆ ತರುವ ಜವಾಬ್ದಾರಿಯನ್ನು ಶಿಕ್ಷಕರು ತೆಗೆದುಕೊಳ್ಳಬೇಕು. 2024–25 ಸಾಲಿನ ಶೈಕ್ಷಣಿಕ ವರ್ಷದಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶವನ್ನು ಸುಧಾರಿಸಿ ಜಿಲ್ಲೆಯನ್ನು ಮೊದಲ ಹತ್ತು ಸ್ಥಾನದೊಳಗೆ ತರಲು ಶಿಕ್ಷಕರು ಪ್ರಯತ್ನಿಸಬೇಕು ಎಂದು ಸಚಿವ ಡಿ.ಸುಧಾಕರ್ ತಾಕೀತು ಮಾಡಿದರು.

**ಶಿಕ್ಷಕರನ್ನು ಕೆಟ್ಟದಾಗಿ ಬಿಂಬಿಸುವ ಪ್ರಯತ್ನಕ್ಕೆ ಬೇಸರ :** ಸಾಮಾಜಿಕ ಮಾಧ್ಯಮಗಳ ಮೂಲಕ ಶಿಕ್ಷಕರನ್ನು ಅಪರಾಧಿ ಸ್ಥಾನದಲ್ಲಿ ನಿಲ್ಲಿಸಿ, ಕೆಟ್ಟದಾಗಿ ಬಿಂಬಿಸುವಂತಹ ಪ್ರಯತ್ನವಾಗುತ್ತಿರುವುದಕ್ಕೆ ಸಂಸದ ಗೋವಿಂದ ಎಂ ಕಾರಜೋಳ ಬೇಸರ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಈ ಹಿಂದೆ ಶಿಕ್ಷಕರು ನಮ್ಮನ್ನು ಒಚಿಟಿ ಕಾಲಿನ ಮೇಲೆ ನಿಲ್ಲಿಸಿ ಪಾಠ ಹೇಳಿಕೊಡುತ್ತಿದ್ದರು. ತಪ್ಪು ಮಾಡಿದರೆ ಶಿಕ್ಷಿಸುತ್ತಿದ್ದರು. ಇದನ್ನು ಪಾಲಕರು ಸಹ ಒಪ್ಪಿದ್ದರು. ಈಗ ಮಕ್ಕಳನ್ನು ದಂಡಿಸಿದರೆ, ಪಾಲಕರು ಶಿಕ್ಷಕರ ಮೇಲೆ ಜಗಳಕ್ಕೆ ಹೋಗುತ್ತಾರೆ. ಇನ್ನು ಹಲವು ಸಾಮಾಜಿಕ ಮಾಧ್ಯಮಗಳಲ್ಲಿ ಶಿಕ್ಷಕರು ಮಕ್ಕಳನ್ನು ಶೌಚಾಲಯ ತೊಳಿಯಲು ಹಚ್ಚಿದ್ದಾರೆ ಎನ್ನುವ ವಿಡಿಯೋ ಹರಿದಾಡಿಸಿ, ಸರ್ಕಾರ ಅವರ ಮೇಲೆ ಕ್ರಮ ಕೈಗೊಂಡ ಪ್ರಸಂಗವೂ ಜರುಗಿವೆ. ಮುಂದುವರಿದ ಜಪಾನ್ ದೇಶದಲ್ಲಿ ಇಂದಿಗೂ ಶಿಕ್ಷಕರು ಹಾಗೂ ಮಕ್ಕಳೇ ಅಲ್ಲಿನ ಶೌಚಾಲಯಗಳನ್ನು ಸ್ವಚ್ಚಗೊಳಿಸುತ್ತಾರೆ. ನಾನು ಓದುವಾಗ ನಮ್ಮ ಹಾಸ್ಟೆಲ್ ಕಸವನ್ನು ನಾವೇ ಗುಡಿಸಿ ಸ್ವಚ್ಚಗೊಳಿಸಿದ್ದೇವೆ. ಇಂದು ಮಕ್ಕಳ ಕೈಗೆ ಪೊರಕೆ ನೀಡಿದರೆ ಅಪರಾಧ ಎನ್ನುವ ಪರಿಸ್ಥಿತಿ ಎದುರಾಗಿದೆ. ಇಂತಹ ಘಟನೆಗಳಿಂದ ಮಕ್ಕಳಿಗೆ ಸ್ವಚ್ಛತೆ ಮಾಡುವ ಕೆಲಸ ಕೀಳು ಎಂಬ ಭಾವನೆ ಮೂಡುತ್ತಿದೆ. ಇದರ ಬದಲಾಗಿ ಸ್ವಚ್ಛತೆ ಬಗ್ಗೆ ಮಕ್ಕಳಿಗೆ ಕಲಿಸಿಕೊಡುವುದು ಅವಶ್ಯಕವಿದೆ ಎಂದು ಗೋವಿಂದ ಕಾರಜೋಳ ಹೇಳಿದರು.

ಪ್ರಾಚೀನ ಕಾಲದಿಂದಲೂ ಶಿಕ್ಷಕ ವೃತ್ತಿ ಶ್ರೇಷ್ಠವಾದದು ಎಂದು ಭಾವಿಸಲಾಗಿದೆ. ದೇಶದ ಮೊದಲ ಉಪರಾಷ್ಟ್ರಪತಿ ಹಾಗೂ ಎರಡನೇ ರಾಷ್ಟ್ರಪತಿಗಳಾಗಿ ಕಾರ್ಯನಿರ್ವಹಿಸಿದ್ದ ಡಾ.ಸರ್ವೆಪಲ್ಲಿ ರಾಧಾಕೃಷ್ಣನ್ ಅವರು ಸಹ ಶಿಕ್ಷಕರಾಗಿದ್ದರು. ಇವರ ಜನ್ಮದಿನಾಚರಣೆಯನ್ನು ಶಿಕ್ಷಕ ದಿನಾಚರಣೆಯಗಿ ದೇಶದಾದ್ಯಂತ ಆಚರಿಸಲಾಗುತ್ತಿದೆ. ಇಂದಿನ ರಾಷ್ಟ್ರಪತಿಗಳಾದ ದ್ರೌಪದಿ ಮುರ್ಮು ಸಹ ಶಿಕ್ಷಕರಾಗಿದ್ದರು. ಮಾಜಿ ರಾಷ್ಟ್ರಪತಿ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ಸಹಿತ ಶಿಕ್ಷಕ ವೃತ್ತಿಯನ್ನು ತುಂಬಾ ಪ್ರೀತಿಸುತ್ತಿದ್ದರು. ಎಲ್ಲೇ ಕಾರ್ಯಕ್ರಮಗಳಿಗೆ ಹೋದರೂ ಉಪನ್ಯಾಸವನ್ನು ನೀಡುತ್ತಿದ್ದರು. ಸಮಾಜವನ್ನು ಸರಿ ದಾರಿಗೆ ತಂದು, ಸುಂದರ ನಿರ್ಮಾಣ ಮಾಡುವ ಕೆಲಸ ಶಿಕ್ಷಕರಿಂದ ಮಾತ್ರ ಸಾಧ್ಯ ಎಂದರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ ಶಿಕ್ಷಕರು ಆತ್ಮಾವಲೋಕನ ಮಾಡಿಕೊಳ್ಳುವ ದಿನ ಶಿಕ್ಷಕರ ದಿನಾಚರಣೆಯಾಗಿದೆ. ವೃತ್ತಿಗೆ ನ್ಯಾಯ ಒದಗಿಸುತ್ತೇವೆ ಎಂದು ಚಿಂತನೆ ನಡೆಸಬೇಕಿದೆ. ಇಂದು ಪದವಿ ಪಡೆದ ಶಿಕ್ಷಕರು ಇದ್ದರೂ ಮಕ್ಕಳಿಗೆ ಶಿಕ್ಷಣ ನೀಡುವಲ್ಲಿ ವಿಫಲರಾಗುತ್ತಿದ್ದೇವೆ. 20 ರಿಂದ 25 ವಯಸ್ಸಿನ ಸುಮಾರು 40 ರಿಂದ 70 ಮಕ್ಕಳು ಜಿಲ್ಲಾ ಕಾರಾಗೃಹದಲ್ಲಿ ಪೋಕ್ಸೋ ಕಾಯ್ದೆಯಡಿ ಬಂಧನವಾಗಿ ಜೈಲಿನಲ್ಲಿ ಶಿಕ್ಷೆ ಅನುಭವಿಸುತ್ತಿದ್ದಾರೆ. ಜಿಲ್ಲೆಯಲ್ಲಿ ಬಾಲ್ಯವಿವಾಹ ಹಾಗೂ ಬಾಲಗರ್ಭಿಣಿಯರ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿವೆ. ಶಿಕ್ಷಕರು ಈ ಬಗ್ಗೆ ನಿಗಾ ವಹಿಸಬೇಕು. ಯೋಧರು, ರೈತರಂತೆ, ಶಿಕ್ಷಕರು ಕೂಡ ದೇಶ ನಿರ್ಮಾಣಕ್ಕೆ ಮುಖ್ಯವಾಗಿದ್ದಾರೆ ಎಂದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಭಾಜನರದ 24 ಶಿಕ್ಷಕರು ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನಿಸಲಾಯಿತು. ನಗರಸಭೆ ಅಧ್ಯಕ್ಷೆ ಸುಮಿತಾ ರಘು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಣ್ಣ, ಸಿ.ಟಿ.ಇ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಸಹ ನಿರ್ದೇಶಕಿ ಟಿ.ಜಿ.ಲೀಲಾವತಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೆ.ಟಿ.ತಿಮ್ಮಾರೆಡ್ಡಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್. ಮಂಜುನಾಥ, ಡಯಟ್ ಪ್ರಾಂಶುಪಾಲ ಎಂ.ನಾಸೀರುದ್ದೀನ್, ಕ್ಷೇತ್ರಶಿಕ್ಷಣಾಧಿರಿ ನಾಗಭೂಷಣ್ ಸೇರಿದಂತೆ ವಿವಿಧ ಶಿಕ್ಷಕ ಸಂಘಟನೆಗಳ ಜಿಲ್ಲಾಧ್ಯಕ್ಷರು, ಕಾರ್ಯದರ್ಶಿಗಳು ಉಪಸ್ಥಿತರಿದ್ದರು







## ಪ್ರಮುಖ ಸುದ್ದಿ

### ಸಾವಿರಾರು ವಿದ್ಯಾರ್ಥಿಗಳ ಭವಿಷ್ಯವನ್ನು ನಿರ್ಮಿಸುವ ಶಿಕ್ಷಕರ ಕಾರ್ಯ ಪವಿತ್ರವಾದದ್ದು: ಶಾಸಕ ರಘುಮೂರ್ತಿ

# ಶಿಕ್ಷಕ ವೃತ್ತಿಯ ಬಗ್ಗೆ ಸಮಾಜ ಹಾಗೂ ಸರ್ಕಾರಕ್ಕೆ ಗೌರವಿದೆ

» **ಚಳ್ಳಕೆರೆ**

ವಿದ್ಯಾರ್ಥಿಗಳಲ್ಲಿರುವ ಅಜ್ಞಾನವನ್ನು ತಮ್ಮಲ್ಲಿರುವ ಜ್ಞಾನಸುಧೆಯನ್ನು ಹರಿಸಿ ಅವರು ಉಜ್ವಲ ಬದುಕು ರೂಪಿಸಿಕೊಳ್ಳಲು ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸುವ ಶಿಕ್ಷಕರ ಮೇಲೆ ಮಹತ್ತವಾದ ಜವಾಬ್ದಾರಿ ಇದೆ. ಸರ್ಕಾರ ಹಾಗೂ ಸಮಾಜ ಶಿಕ್ಷಕರ ಸಮೂಹದ ಮೇಲೆ ಅಪಾರವಾದ ಗೌರವ, ವಿಶ್ವಾಸವಿಟ್ಟಿದ್ದಾರೆ. ಶಿಕ್ಷಕರು ವಿದ್ಯಾರ್ಥಿಗಳ ಬದುಕನ್ನು ಬೆಳಗುವ ಜ್ಯೋತಿಗಳಾಗಿ ಪ್ರಜ್ವಲಿಸಬೇಕೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.



ಅವರು, ಗುರುವಾರ ವಾಲ್ಮೀಕಿ ಕಲ್ಯಾಣಮಂಟಪದಲ್ಲಿ ಶಿಕ್ಷಣ ಕ್ಷೇತ್ರದ ದೈತಶಕ್ತಿ, ಭಾರತದ ವರಪುತ್ರ ಮಾಜಿ ರಾಷ್ಟ್ರಪತಿ ಡಾ.ಸರ್ವಪಲ್ಲಿರಾಧಕೃಷ್ಣನ್‌ರವರ ಜನ್ಮದಿನಾಚರಣೆಯನ್ನು ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನಾಗಿ ಆಚರಣೆ ಮಾಡುತ್ತಿದ್ದು, ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕ್ಷೇತ್ರದ ಶಾಸಕನಾಗಿ ಮೂರನೇ ಬಾರಿಗೆ ಆಯ್ಕೆಯಾದರೂ ಇಲ್ಲಿ ನಡೆದ 12ನೇ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ನಾನು ಭಾಗಹಿಸಿದ್ದೇನೆ. ಉಸ್ತುವಾರಿ ಸಚಿವ ಡಿ.ಸುಧಾಕರ್ ಪರವಾಗಿ ಕಾರ್ಯಕ್ರಮ ಉದ್ಘಾಟಿಸಿದ್ದೇನೆ. ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದವರನ್ನು ಸನ್ಮಾನಿಸುವುದಲ್ಲದೆ, ನಿವೃತ್ತ ಶಿಕ್ಷಕರನ್ನು ಗೌರವಿಸುವ ಸೌಭಾಗ್ಯ ನನಗೆ ದೊರಕಿದೆ. ಯಾವುದೇ ಕ್ಷೇತ್ರದಲ್ಲಿ ನಾವು ಅಭಿವೃದ್ಧಿಯನ್ನು ದಾಖಲಿಸಬೇಕಾದರೆ ಅಲ್ಲಿ ಪ್ರಮುಖವಾಗಿ ಕಾರ್ಯನಿರ್ವಹಿಸುವುದು ತಾಂತ್ರಿಕ ಜ್ಞಾನ. ಇಂತಹ ಜ್ಞಾನವನ್ನು ಕೇವಲ ಶಿಕ್ಷಕರಿಂದ ಮಾತ್ರ ನೀಡಲು ಸಾಧ್ಯ. ಸಮಾಜದ ಸರ್ವತೋಮುಖ ಏಳಿಗೆ, ಅಭಿವೃದ್ಧಿ, ಅಸಮತೋಲನ, ಸಮಾನತೆ ಇವೆಲ್ಲವನ್ನೂ ನಾವು ಒಂದೇ ವೇದಿಕೆಯಲ್ಲಿ ಕಾಣಬೇಕಾದರೆ ಅದಕ್ಕೆ ಶಿಕ್ಷಣ ನೀಡಿದ ಶಿಕ್ಷಕ ಕಾರಣಕರ್ತನಾಗುತ್ತಾನೆ. ಇದು ಅತ್ಯಂತ ಪುಣ್ಯದ ಕಾರ್ಯವಾಗಿದ್ದು, ಎಲ್ಲಾ ಶಿಕ್ಷಕರು ಸಮಾಜದ ಹಿತದೃಷ್ಟಿಯಿಂದ ಕಾರ್ಯನಿರ್ವಹಿಸಬೇಕು. ನಿಮ್ಮ ಕೊಡುಗೆಯನ್ನು ಸಮಾಜ ಸದಾ ಸ್ಮರಿಸುತ್ತದೆ ಎಂದರು.

ಪ್ರಾಸ್ತಾವಿಕ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಚಳ್ಳಕೆರೆ ತಾಲ್ಲೂಕು ಶೈಕ್ಷಣಿಕ ದೃಷ್ಠಿಯಿಂದ ಹಲವಾರು ಬದಲಾವಣೆಗಳನ್ನು ಕಾಣುತ್ತಿದೆ. ವಿಶೇಷವಾಗಿ ತಾಲ್ಲೂಕಿನಾದ್ಯಂತ ಸರ್ಕಾರಿ ಶಾಲೆಗಳ ತುರ್ತು ರಿಪೇರಿಗಾಗಿ ಶಾಸಕರು ತಮ್ಮ ಅನುದಾನದಲ್ಲಿ ಹಣ ಮಂಜೂರು ಮಾಡಿದ್ದಾರೆ. ಕಳೆದ ವರ್ಷ ಎಸ್‌ಎಸ್‌ಎಲ್‌ಸಿ ಫಲಿತಾಂಶ ಹಿನ್ನಡೆಯಾಗಿದ್ದು, ಈ ಬಾರಿ ಇನ್ನೂ ಹೆಚ್ಚಿನ ಫಲಿತಾಂಶವನ್ನು ಪಡೆಯುವ ನಿಟ್ಟಿನಲ್ಲಿ ಶಿಕ್ಷಕರ ಸಮೂಹ ಶಿಕ್ಷಣ ಇಲಾಖೆಯೊಂದಿಗೆ ಕೈಜೋಡಿಸಿ ಎಂದರು. ಉಪನ್ಯಾಸ ನೀಡಿದ ಶಿಕ್ಷಕ ಶ್ರೀಕಾಂತ್‌ಹುಲುಮನಿ, ಶಿಕ್ಷಕ ವೃತ್ತಿಯನ್ನು ಮಾಡುವವರು ಕೇವಲ ಪದವಿ ಪಡೆದು ಬೋಧನೆ ಮಾಡಿದರೆ ಸಾಲದು, ವಾಸ್ತವಿಕವಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಮಟ್ಟದ ಬಗ್ಗೆ ಅವರಲ್ಲಿ ಜಾಗೃತಿ ಮೂಡಿಸಬೇಕು. ವಿದ್ಯಾರ್ಥಿ ಕ್ರಮಬದ್ಧವಾಗಿ ಪಾಠಗಳನ್ನು ಕೇಳುವಂತಹ ಸ್ಥಿತಿಯನ್ನು ಶಿಕ್ಷಕರು ನಿರ್ಮಾಣ ಮಾಡಬೇಕು. ಶಿಕ್ಷಕ ಪ್ರಾಮಾಣಿಕವಾಗಿ ಪ್ರಯತ್ನಿಸಿದರೆ ಯಾವ ವಿದ್ಯಾರ್ಥಿಯೂ ಸಮಾಜಕ್ಕೆ ಕಂಟಕನಾಗಲು ಸಾಧ್ಯವಿಲ್ಲ ಎಂದರು.

ಕಾರ್ಯಕ್ರಮ ಉದ್ದೇಶಿಸಿ ನಗರಸಭೆ ಉಪಾಧ್ಯಕ್ಷೆ ಓ.ಸುಜಾತಪ್ರಹ್ಲಾದ್, ಸದಸ್ಯೆ ಕವಿತಾಬೋರಯ್ಯ ಮಾತನಾಡಿದರು.


ಪುಟ 2

## ಫಾಸ್ಟ್ ನ್ಯೂಸ್

### ಕೆ.ನಾಗಪ್ಪ ನಿಧನ

» **ನಾಯಕನಹಟ್ಟಿ**



ಪಟ್ಟಣದ ಗುರುತಿಪ್ಪೇರುದ್ರಸ್ವಾಮಿ ವ್ಯವಸ್ಥಾಪನಾ ಸಮಿತಿಮಾಜಿಸದಸ್ಯಕೆ.ನಾಗಪ್ಪ (70) ಗುರುವಾರ ಬೆಳಗಿನ ಜಾವ ಅನಾರೋಗ್ಯದಿಂದ ನಿಧನರಾಗಿದ್ದಾರೆ. ಮೃತರಿಗೆ ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಇದ್ದಾರೆ. ಮೃತರ ಅಂತ್ಯಕ್ರಿಯೆಯನ್ನು ಗುರುವಾರ ಸಂಜೆ ನಾಯಕನಹಟ್ಟಿ ಪಟ್ಟಣದ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

**ಗಣ್ಯರ ಸಂತಾಪ.** ಕೆ.ನಾಗಪ್ಪ ಅವರು ನಾಯಕನಹಟ್ಟಿ ಗ್ರಾಮಪಂಚಾಯಿತಿ ಸದಸ್ಯರಾಗಿ, ಗುರುತಿಪ್ಪೇರುದ್ರಸ್ವಾಮಿ ದೇಗುಲದ ವ್ಯವಸ್ಥಾಪನಾ ಸಮಿತಿ ಸದಸ್ಯರಾಗಿ ಸೇವೆಸಲ್ಲಿಸಿದ್ದರು. ಅವರು ಮೃತಪಟ್ಟ ಸುದ್ದಿ ತಿಳಿದು ಗಣ್ಯರಾದ ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಪಟೇಲ್ ಜಿ.ಎಂ. ತಿಪ್ಪೇಸ್ವಾಮಿ(ಎತ್ತಿನಹಟ್ಟಿಗೌಡ್ರು), ತಾ.ಪಂ.ಮಾಜಿ ಸದಸ್ಯರಾದ ಸಮರ್ಥರಾಯ್, ನಾಯಕನಹಟ್ಟಿ ಪ.ಪಂ.ಅಧ್ಯಕ್ಷೆ ಮಂಜುಳಾಶ್ರೀಕಾಂತ್, ಉಪಾಧ್ಯಕ್ಷೆ ಸರ್ವಮಂಗಳ ಎಸ್.ಉಮಾಪತಿ, ಸದಸ್ಯರಾದ ಜೆ.ಆರ್.ರವಿಕುಮಾರ್, ಸೈಯದ್ಅನ್ವರ್, ಪಿ.ಓಬಯ್ಯ, ಮನ್ಸೂರ್, ದೇವಾಲಯದ ವ್ಯವಸ್ಥಾಪನಾ ಸಮಿತಿ ಮಾಜಿ ಅಧ್ಯಕ್ಷ ಜೆ.ಪಿ.ರವಿಶಂಕರ್, ದೇವಾಲಯ ಕಾರ್ಯನಿರ್ವಹಣಾಧಿಕಾರಿ ಹೆಚ್.ಗಂಗಾಧರಪ್ಪ ಮುಖಂಡರಾದ ಶಂಕರ್‌ಯಾದವ್, ಕೆ.ಎಂ.ಮಹಮ್ಮದ್ ಯೂಸೂಫ್, ಸಂತಾಪ ಸೂಚಿಸಿದರು.

### ಶಿಕ್ಷಕ ವೃತ್ತಿಯ ಬಗ್ಗೆ ಸಮಾಜ ಹಾಗೂ ಸರ್ಕಾರಕ್ಕೆ ಗೌರವಿದೆ

» ಮೊದಲ ಪುಟದಿಂದ

ವೇದಿಕೆಯಲ್ಲಿ ಇಒ ಎಚ್.ಶಶಿಧರ, ಸಹಾಯಕ ನಿರ್ದೇಶಕ ಜಿ.ಟಿ.ಮಂಜುನಾಥಸ್ವಾಮಿ, ಸುನೀಲ್‌ನಾಯ್ಕ,ಪುರುಷೋತ್ತಮ,ಬಿ.ತಿಪ್ಪೇಸ್ವಾಮಿ, ನಗರಸಭೆ ಅಧ್ಯಕ್ಷೆ ಜೈತುಂಬಿ, ಸದಸ್ಯರಾದ ಎಂ.ಜೆ. ರಾಘವೇಂದ್ರ,ಕೆ.ವೀರಭದ್ರಪ್ಪ,ಬಿ.ಟಿ.ರಮೇಶ್‌ಗೌಡ, ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಪಿ.ಎಲ್.ಲಿಂಗೇಗೌಡ, ಕನ್ನಡಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಡಿ.ಮಹಲಿಂಗಪ್ಪ, ಬಿ.ರಾಜಕುಮಾರ್, ಸಿ.ಟಿ.ವೀರೇಶ್, ಡಿ.ಟಿ.ಶ್ರೀನಿವಾಸನ್, ಡಿ.ಈರಣ್ಣ, ಆರ್.ಸಿದ್ದಲಿಂಗಪ್ಪ, ಡಿ.ಎಸ್.ಪಾಲಯ್ಯ, ಸುರೇಶ್, ಶ್ರೀರಾಮನಾಯಕ, ಬಿ.ಸುರೇಶ್, ಡಿ.ಮಹಲಿಂಗಪ್ಪ, ಆರ್.ಮಾರುತೇಶ್ ಮುಂತಾದವರು ಉಪಸ್ಥಿತರಿದ್ದರು.

### ಹೊಯ್ಸಳ ಹಾಗೂ ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024ನೇ ಸಾಲಿನ ಮಕ್ಕಳ ದಿನಾಚರಣೆ ಅಂಗವಾಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಹೊಯ್ಸಳ ಹಾಗೂ ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ, ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ ನೀಡಲು ನಾಮ ನಿರ್ದೇಶನಕ್ಕಾಗಿ ಅರ್ಜಿ ಆಹ್ವಾನಿಸಾಗಿದೆ.

ಪ್ರಾಣದ ಹಂಗು ತೊರೆದು, ಸಮಯ ಪ್ರಜ್ಞೆಯಿಂದ ಇತರ ವ್ಯಕ್ತಿಗಳ ಪ್ರಾಣ ರಕ್ಷಿಸಿ ಸಾಹಸ ಪ್ರದರ್ಶಿಸಿದ 6 ರಿಂದ 18 ವರ್ಷದೊಳಗಿನ ಬಾಲಕರಿಗೆ ಹೊಯ್ಸಳ ಹಾಗೂ ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ ನೀಡಲಾಗುವುದು. ಸಾಹಸ ಘಟನೆಯು 1 ಆಗಸ್ಟ್ 2023 ರಿಂದ 31 ಜುಲೈ 2024ರ ಒಳಗೆ ನಡೆದಿರಬೇಕು. 1 ಆಗಸ್ಟ್ 2006 ರಂದು ಹಾಗೂ ನಂತರ ಜನಿಸಿದ ಮಕ್ಕಳು ಪ್ರಶಸ್ತಿಗೆ ಅರ್ಹರಾಗಿರುತ್ತಾರೆ. ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000 ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಲಾಗುವುದು. ಮಕ್ಕಳ ಕ್ಷೇತ್ರದಲ್ಲಿ ಅತ್ಯತ್ತಮ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ತಲಾ ರೂ.25,000 ಹಾಗೂ ಸಂಸ್ಥೆಗಳಿಗೆ ತಲಾ ರೂ.10,000 ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.ಅರ್ಜಿ ನಮೂನೆಯನ್ನು ಚಿತ್ರದುರ್ಗ ನಗರದ ಸ್ಟೇಡಿಯಂ ಹತ್ತಿರದ ಜಿಲ್ಲಾ ಬಾಲಭವನದ ಆವರಣದಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಕಚೇರಿಯಿಂದಪಡೆಯಬಹುದು. ಅರ್ಜಿಯನ್ನು ಕನ್ನಡ ಭಾಷೆಯಲ್ಲಿಯೇ ಭರ್ತಿ ಮಾಡಿ, ಸೆಪ್ಟೆಂಬರ್ 20 ರ ಒಳಗಾಗಿ ಕಚೇರಿ ಸಲ್ಲಿಸುವಂತೆ ಉಪನಿರ್ದೇಶಕಿ ಭಾರತಿ ಬಣಕಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಮ್ ಸ್ಥಾಪನೆ: ಸಹಾಯಧನ ಅರ್ಜಿ

» **ಚಿತ್ರದುರ್ಗ**

2024–25ನೇ ಸಾಲಿಗೆ ಪರಿಶಿಷ್ಟ ಜಾತಿ ಉಪಯೋಜನೆ ಅಡಿಯಲ್ಲಿ ಅಂತರಾಷ್ಟ್ರೀಯ ಮತ್ತು ರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾ ಕೂಟಗಳಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಕ್ರೀಡಾಪಟುಗಳಿಗೆ ಸ್ವಯಂ ಉದ್ಯೋಗ ಕಲ್ಪಿಸಲು ಜಿಮ್ ಸ್ಥಾಪನೆಗೆ ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಕೇಂದ್ರ ಕಚೇರಿಗೆ ನೇರವಾಗಿ ಬಂದ ಅರ್ಜಿ, ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

---

ಸೆ. 15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನ –ವಿವಿಧ ಸಂಘ ಸಂಸ್ಥೆಗಳು, ಸಂಘಟನೆಗಳ ಸಹಕಾರ ಪಡೆಯಲು ಮುಖ್ಯಮಂತ್ರಿ ಸೂಚನೆ

# ಜಿಲ್ಲೆಯಲ್ಲಿ 135 ಕಿ.ಮೀ. ಮಾನವ ಸರಪಳಿ ಯಶಸ್ವಿಗೆ ಸಿದ್ಧತೆ ಪ್ರಾರಂಭ: ಡಿಸಿ ವೆಂಕಟೇಶ್

» **ಚಿತ್ರದುರ್ಗ**

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಇದೇ ಸೆ. 15 ರಂದು ರಾಜ್ಯಾದ್ಯಂತ ಏಕಕಾಲಕ್ಕೆ ಮಾನವ ಸರಪಳಿ ನಿರ್ಮಿಸುವ ಮೂಲಕ ವಿಶಿಷ್ಟವಾಗಿ ಆಚರಿಸಲಾಗುತ್ತಿದ್ದು, ವಿವಿಧ ಸಂಘ ಸಂಸ್ಥೆಗಳು, ಸಂಘಟನೆಗಳ ಸಹಕಾರದೊಂದಿಗೆ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು, ಚಿತ್ರದುರ್ಗ ಜಿಲ್ಲೆಯಲ್ಲಿ 135 ಕಿ.ಮೀ. ಮಾನವ ಸರಪಳಿ ನಿರ್ಮಿಸಲು ಈಗಾಗಲೆ ಅಗತ್ಯ ಸಿದ್ಧತೆಗಳನ್ನು ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಹೇಳಿದ್ದಾರೆ.



ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಸಂಬಂಧ ಮುಖ್ಯಮಂತ್ರಿಯವರು ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆಸಿದ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂತರಾಷ್ಟ್ರೀಯಪ್ರಜಾಪ್ರಭುತ್ವದಿನವನ್ನು ಪ್ರತಿ ವರ್ಷ ಸೆ. 15 ರಂದು ವಿಶಿಷ್ಟವಾಗಿ ಆಚರಿಸಲು ನಿರ್ಧರಿಸಲಾಗಿದೆ. ಕಳೆದ ವರ್ಷ ಸಂವಿಧಾನದ ಪೀಠಿಕೆಯನ್ನು ಸಾಮೂಹಿಕವಾಗಿ ರಾಜ್ಯಾದ್ಯಂತ ಓದುವಂತಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ವರ್ಷ ರಾಜ್ಯದಲ್ಲಿ ಏಕಕಾಲಕ್ಕೆ ಮಾನವ ಸರಪಳಿ ನಿರ್ಮಿಸಿ, ಏಕಕಾಲಕ್ಕೆ ಸಂವಿಧಾನ ಪೀಠಿಕೆ ವಾಚನ ಮಾಡುವ ಕಾರ್ಯಕ್ರಮ ಆಯೋಜಿಸಲಾಗಿದೆ. ಇದಕ್ಕೆ ಎಲ್ಲ ಜಿಲ್ಲೆಗಳ ಉಸ್ತುವಾರಿ ಸಚಿವರುಗಳು ಆಸಕ್ತಿ ವಹಿಸಿ, ಆಯಾ ಜಿಲ್ಲೆಗಳಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಿದ್ಧತೆಗಳನ್ನು ಕೈಗೊಳ್ಳಬೇಕು. ಸಂವಿಧಾನದ ಮಹತ್ವದ ಬಗ್ಗೆ ಯುವಪೀಳಿಗೆಗೆ ಹೆಚ್ಚಿನ ಜಾಗೃತಿ ಮೂಡಿಸಿ, ಎಲ್ಲ ಸಮುದಾಯ ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಮಾಡಬೇಕು ಎಂದು ಸೂಚನೆ ನೀಡಿದರು.

ವಿಡಿಯೋ ಕಾನ್ಫರೆನ್ಸ್‌ನಲ್ಲಿ ಭಾಗವಹಿಸಿದ್ದ ಸಮಾಜ ಕಲ್ಯಾಣ ಸಚಿವ ಮಹದೇವಪ್ಪ ಅವರು ಮಾತನಾಡಿ, ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವು ದೇಶಾಭಿಮಾನ ಬಿಂಬಿಸುವ ವಿಶೇಷ ಕಾರ್ಯಕ್ರಮವಾಗಿದ್ದು, ಎಲ್ಲ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಪಾಲ್ಗೊಳ್ಳಬೇಕು. ಎಲ್ಲ ಜಿಲ್ಲೆಗಳಲ್ಲೂ ಅಂದು ಏಕಕಾಲಕ್ಕೆ ಮಾನವ ಸರಪಳಿ ನಿರ್ಮಿಸಲಾಗುತ್ತಿದೆ. ಕಾರ್ಯಕ್ರಮದ ಯಶಸ್ವಿಗೆ ಆಯಾ ಜಿಲ್ಲಾಧಿಕಾರಿಗಳು ವಿವಿಧ ಸಂಘಸಂಸ್ಥೆಗಳು, ಸಂಘಟನೆಗಳು, ಜನಪ್ರತಿನಿಧಿಗಳ ಸಹಕಾರದೊಂದಿಗೆ ಸಮರ್ಪಕವಾಗಿ ಅನುಷ್ಠಾನ ಮಾಡಬೇಕು ಎಂದು ಸೂಚನೆ ನೀಡಿದರು.

ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಮಾತನಾಡಿ, ರಾಜ್ಯದಲ್ಲಿ ಏರ್ಪಡಿಸಲಾಗುತ್ತಿರುವ ಮಾನವ ಸರಪಳಿ ಕಾರ್ಯಕ್ರಮ ಸಂದರ್ಭವನ್ನು ಬಳಸಿಕೊಂಡು ಅರಣ್ಯ ಇಲಾಖೆಯಿಂದ ರಾಜ್ಯದಲ್ಲಿ ಒಟ್ಟು 10 ಲಕ್ಷ ಸಸಿಗಳನ್ನು ನೆಡಲು ಕ್ರಮ ಕೈಗೊಳ್ಳಲಾಗುವುದು ಎಂದರು.ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಮಾಹಿತಿ ನೀಡಿ, ಜಿಲ್ಲೆಯಲ್ಲಿ 135 ಕಿ.ಮೀ. ನಷ್ಟು ಮಾನವ ಸರಪಳಿ ನಿರ್ಮಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಲು ಅಗತ್ಯವಿರುವ ಎಲ್ಲ ಸಿದ್ಧತೆಗಳನ್ನು ಈಗಾಗಲೆ ಕೈಗೊಳ್ಳಲಾಗಿದೆ. ರಾಜ್ಯ ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರ ಅಧ್ಯಕ್ಷತೆಯಲ್ಲಿ ಅಧಿಕಾರಿಗಳೊಂದಿಗೆ ಸಿದ್ದತಾ ಸಭೆಯನ್ನು ನಡೆಸಲಾಗಿದ್ದು, ಯಶಸ್ವಿಗೆ ಅಗತ್ಯವಿರುವ ಸಲಹೆ ಸೂಚನೆಗಳನ್ನು ನೀಡಿದ್ದಾರೆ. ಅದರಂತೆತಯಾರಿಮಾಡಿಕೊಳ್ಳಲಾಗುತ್ತಿದೆ. ಇದೇ ಸೆ. 09 ರಂದು ಮೊಳಕಾಲ್ಮೂರು, ಚಳ್ಳಕೆರೆ, ಹಿರಿಯೂರಿನಲ್ಲಿ ಮತ್ತೊಂದು ಬಾರಿ ಸಿದ್ಧತಾ ಸಭೆಯನ್ನು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ವಿಡಿಯೋ ಕಾನ್ಫರೆನ್ಸ್‌ನಲ್ಲಿ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಪೌರಾಡಳಿತ ಸಚಿವ ಡಾ. ರಹೀಂ ಖಾನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಸಮಾಜ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಕ್ಯಾ. ಮಣಿವಣ್ಣನ್ ಸೇರಿದಂತೆ ವಿವಿಧ ಅಧಿಕಾರಿಗಳು ಪಾಲ್ಗೊಂಡಿದ್ದರು.

ಚಿತ್ರದುರ್ಗ ಜಿಲ್ಲೆಯಿಂದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಬಂಡಾರು, ಸಮಾಜಕಲ್ಯಾಣಇಲಾಖೆಜಂಟಿನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

---

## ತಹಶೀಲ್ದಾರ್ ವಾಹನಕ್ಕೆ ಬೆಂಕಿ: ಆರೋಪಿ ವಶಕ್ಕೆ

» **ಚಳ್ಳಕೆರೆ**

ನಗರದ ತಾಲ್ಲೂಕು ಕಚೇರಿ ಮುಂಭಾಗ ನಿಲ್ಲಿಸಿದ್ದ ತಹಶೀಲ್ದಾರ್ ಜೀಫ್‌ಗೆ ಪೆಟ್ರೋಲ್ ಸುರಿದು ಬೆಂಕಿಹಚ್ಚಿದ ಘಟನೆ ಗುರುವಾರ ನಡೆದಿದೆ.





ಕಳೆದ ಮೂರು ದಿನಗಳಿಂದ ಚಳ್ಳಕೆರೆ ನಗರದ ತಾಲ್ಲೂಕು ಕಚೇರಿ, ಪೊಲೀಸ್ ಠಾಣೆಗಳ ಬಳಿ ಓಡಾಟ ನಡೆಸುತ್ತಿದ್ದ ಈತ ಪೊಲೀಸ್ ಜೀಫ್‌ಗೆ ಪೆಟ್ರೋಲ್ ಸುರಿದು ಬೆಂಕಿಹಚ್ಚುವುದಾಗಿ ಹೇಳಿಕೊಳ್ಳುತ್ತಿದ್ದ. ಗುರುವಾರ ತನ್ನ ಬ್ಯಾಗ್‌ನಲ್ಲಿ ಪೆಟ್ರೋಲ್‌ನಿಂದ ಠಾಣೆಗೆ ಆಗಮಿಸಿದಾಗ ಯಾವುದೇ ಪೊಲೀಸ್ ವಾಹನ ಇರದ ಕಾರಣ ತಾಲ್ಲೂಕು ಕಚೇರಿ ಮುಂದೆ ನಿಂತಿದ್ದ ತಹಶೀಲ್ದಾರ್ ಜೀಪ್‌ನ್ನು ಮುಂಭಾಗದಿಂದ ಏರಿ ಟಾಪ್ ಮೇಲೆ ನಿಂತು ಕೂಗಾಡುತ್ತಾ ಜೀಫ್ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾನೆ. ಕೂಡಲೇ ಸಾರ್ವಜನಿಕರು ಹೊತ್ತಿಉರಿಯುತ್ತಿದ್ದ ಬೆಂಕಿಯನ್ನು ನಂದಿಸಿದ್ದಾರೆ. ಜೀಪ್ ಚಾಲಕ ಹಾಗೂ ಇನ್ನಿತರರು ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದು, ವಿಷಯ ಅರಿತ ಪೊಲೀಸರು ಪೃಥ್ವಿಯನ್ನು ತಮ್ಮವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ.

ಕಳೆದ ಜುಲೈ 28ರಂದು ತಾಯಿಯಿಂದ ನಾಪತ್ತೆ ಪ್ರಕರಣ ಚಳ್ಳಕೆರೆ ಪೊಲೀಸರು ದಾಖಲು ಮಾಡಿಲ್ಲವೆಂದು ಅಸಮದಾನಗೊಂಡ ಆತ ಸಾಮಾಜಿಕ ಜಾಲತಾಣದಲ್ಲಿ ಡಿಆರ್‌ಡಿಒ ಸೇರಿದಂತೆ ಅನೇಕ ಅಂತರಾಷ್ಟ್ರಿಯ ಸಂಸ್ಥೆಗಳನ್ನು ಸ್ಫೋಟಿಸುವುದಾಗಿ ಪ್ರಕಟಿಸಿದ್ದ. ತಕ್ಷಣವೇ ಕಾರ್ಯಪ್ರವೃತ್ತರಾದ ಪೊಲೀಸರು ಅವನನ್ನು ಠಾಣೆಗೆ ಕರೆತಂದು ವಿಚಾರಣೆ ನಡೆಸಿ ಬುದ್ದಿವಾದ ಹೇಳಿದ ಹಿನ್ನೆಲೆಯಲ್ಲಿ ಕ್ಷಮಾಪಣೆ ಕೇಳಿಹೋಗಿದ್ದ.

ಕಳೆದ ಆಗಸ್ಟ್ ತಿಂಗಳಲ್ಲಿ ಬೆಂಗಳೂರಿನ ವಿಧಾನಸೌಧ ಮುಂದೆ ತನ್ನ ಮೋಟಾರ್ ಬೈಕ್ ನಿಲ್ಲಿಸಿ ಬೆಂಕಿ ಹಚ್ಚಿ ಅಲ್ಲಿಯೂ ಸಹ ಪೊಲೀಸ್ ಇಲಾಖೆಯ ವ್ಯವಸ್ಥೆಯ ಮೇಲೆ ಹರಿಹಾಯ್ದಿದ್ದ. ನಂತರ ಪೊಲೀಸರು ಈತನನ್ನು ಬಿಟ್ಟುಕಳಿಸಿದ್ದರು.



ಹಾಡುಹಗಲೇ ತಹಶೀಲ್ದಾರ್ ವಾಹನಕ್ಕೆ ಬೆಂಕಿ ಹಚ್ಚಿ ಜೀವ ತೆಗೆಯುವ ಬೆದರಿಕೆ ಹಾಕಿದ್ದದ ಹಿನ್ನೆಲೆಯಲ್ಲಿ ತಾಲ್ಲೂಕು ಕಚೇರಿ ಸಿಬ್ಬಂದಿ ಪೊಲೀಸ್ ಠಾಣೆಯ ಮುಂಭಾಗದಲ್ಲಿ ಕುಳಿತು ಪ್ರತಿಭಟನೆ ನಡೆಸಿದರು. ಸರ್ಕಾರಿ ವಾಹನಕ್ಕೆ ಬೆಂಕಿ ಹಚ್ಚಿದ ಪರಿಣಾಮವಾಗಿ ಸುಮಾರು 2 ಲಕ್ಷ ನಷ್ಟ ಸಂಭವಿಸಿದೆ ಎಂದು ಗುತ್ತಿಗೆ ನೌಕರರ ಅಶೋಕ್ ಪೊಲೀಸರಿಗೆ ದೂರು ನೀಡಿದ್ದಾನೆ.



## ಪಿಒಪಿ ಗಣೇಶನ ಮೂರ್ತಿಗಳನ್ನು ಮಾರಾಟ ಮಾಡಲು ಯತ್ನಿಸಿದರೆ ಕಠಿಣ ಕಾನೂನು ಕ್ರಮ



» **ಚಳ್ಳಕೆರೆ**

ನಗರದ ಪ್ರಮುಖ ರಸ್ತೆಗಳಲ್ಲಿ ಕಳೆದ ಎರಡು ದಿನಗಳಿಂದ ವಿವಿಧ ಜಿಲ್ಲೆಗಳಿಂದ ಶ್ರೀಗಣೇಶನ ವಿಗ್ರಹವನ್ನು ಸಿದ್ದಪಡಿಸಿಕೊಂಡು ಮಾರಾಟ ಮಾಡುವ ಉದ್ದೇಶದಿಂದ ಹಲವಾರು ವ್ಯಾಪಾರಸ್ಥರು ಆಗಮಿಸಿ ವ್ಯಾಪಾರದಲ್ಲಿ ತೊಡಗಿದ್ದು ಬಗ್ಗೆ ಪೌರಾಯುಕ್ತರ ನಿರ್ದೇಶಕನ ಮೇರೆಗೆ ಎಲ್ಲಾ ಗಣೇಶನ ವಿಗ್ರಹ ಮಾರಾಟಗಾರರಿಗೆ ಪಿಒಪಿ ವಿಗ್ರಹಳನ್ನು ಮಾರಾಟ ಮಾಡದಂತೆ ಎಚ್ಚರಿಕೆ ನಿಡಲಾಯಿತು ಎಂದು ಹಿರಿಯ ಆರೋಗ್ಯ ನಿರೀಕ್ಷಕ ಗಣೇಶ್ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಪೌರಾಯುಕ್ತ ಜಗರೆಡ್ಡಿ ಸೂಚನೆ ಮೇರೆಗೆ ನೈರ್ಮಲ್ಯ ಇಂಜಿನಿಯರ್ ಹಾಗೂ ಆರೋಗ್ಯ ನಿರೀಕ್ಷಕರು ತಪಾಸಣಾ ಕಾರ್ಯಕೈಗೊಂಡಿದ್ದು, ಎಲ್ಲೂ ಸಹ ಪಿಒಪಿ ವಿಗ್ರಹ ಕಂಡುಬಂದಿಲ್ಲ. ಆದರೂ ಸಹ ಎಲ್ಲಾ ಮಾರಾಟಗಾರರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿ ಯಾರಾದರೂ ತೆರೆಯಮರೆಯಲ್ಲಿ ಗಣೇಶನ ಪಿಒಪಿ ವಿಗ್ರಹ ಮಾರಾಟ ಮಾಡಲು ಯತ್ನಿಸಿದರೆ ಕಠಿಣ ಕಾನೂನು ಕ್ರಮ ಕೈಗೊಳ್ಳುವುದಾಗಿ ತಿಳಿಸಲಾಗಿದೆ ಎಂದರು. ಗಣೇಶನ ವಿಗ್ರಹವನ್ನು ವಿಸರ್ಜನೆ ಮಾಡುವ ಸ್ಥಳಗಳು :– ಶ್ರೀಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಪೂಜೆಯ ನಂತರ ಗಣೇಶ ವಿಗ್ರಹವನ್ನು ನೀರಿನಲ್ಲಿ ವಿಸರ್ಜನೆ ಮಾಡುವುದು ಸ್ವಾಭಾವಿಕ. ಅದೇ ರೀತಿ ಸಾರ್ವಜನಿಕ ಅನುಕೂಲಕ್ಕಾಗಿ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ, ಹಳೇ ನಗರಸಭೆ, ಕಸ್ತೂರಿಬಾ ಶಾಲೆ ಮುಂಭಾಗ, ತ್ಯಾಗರಾಜ ನಗರ ಪಂಪ್‌ಹೌಸ್ ಬಳಿ ಗಣಪತಿ ವಿಸರ್ಜನೆಗೆ ಅವಕಾಶ ಮಾಡಿಕೊಡಲಾಗಿದೆ.

---

**ಪ್ರಮುಖ ಸುದ್ದಿ**

ಆರೋಗ್ಯ ರಕ್ಷಾ ಸಮಿತಿ ಸಭೆ: ಶಾಸಕ ಟಿ.ರಘುಮೂರ್ತಿ

# ಆಸ್ಪತ್ರೆಗೆ ಬರುವ ರೋಗಿಗಳಿಗೆ ಸಕರಾತ್ಮಕ ಚಿಕಿತ್ಸೆಗೆ ಶ್ರಮವಹಿಸಿ

» **ಚಳ್ಳಕೆರೆ**

ನಗರದ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ನೂತನ ಸರ್ಕಾರ ಇತ್ತೀಚೆಗೆ ರಚಿಸಿದ ಆರೋಗ್ಯ ರಕ್ಷಾ ಸಮಿತಿ ಸಭೆ ಶಾಸಕ ಟಿ.ರಘುಮೂರ್ತಿ ಅಧ್ಯಕ್ಷತೆಯಲ್ಲಿ ನಡೆಯಿತು. ಆಸ್ಪತ್ರೆಯ ಹಲವಾರು ಸಮಸ್ಯೆಗಳ ಬಗ್ಗೆ ವೈದ್ಯರು ಹಾಗೂ ರಕ್ಷಾ ಸಮಿತಿ ಸದಸ್ಯರೊಂದಿಗೆ ಶಾಸಕರು ಮುಕ್ತವಾಗಿ ಚರ್ಚಿಸಿದರು.



ಪ್ರಾರಂಭದಲ್ಲಿ ಎಲ್ಲರನ್ನೂ ಸ್ವಾಗತಿಸಿ ಮಾತನಾಡಿದ ಆಡಳಿತಾಧಿಕಾರಿ ಡಾ.ಜೆ.ಡಿ.ವೆಂಕಟೇಶ್, ಇಲ್ಲಿನ ಆಸ್ಪತ್ರೆಯಲ್ಲಿ ಹೆರಿಗೆಯೂ ಸೇರಿದಂತೆ ಎಲ್ಲಾ ಚಿಕಿತ್ಸೆಗಳನ್ನು ನೀಡಲಾಗುತ್ತಿದೆ.

ಎಲ್ಲಾ ವಿಭಾಗದ ವೈದ್ಯರು ಕಾರ್ಯನಿರ್ವಹಿಸುತ್ತಿದ್ದು, ಇಲ್ಲಿಗೆ ಬರುವ ರೋಗಿಗೆಳಿಗೆ ಯಾವುದೇ ಸಮಸ್ಯೆ ಉಂಟಾಗದಂತೆ ಎಚ್ಚರಿಕೆ ವಹಿಸಲಾಗಿದೆ. ಕಳೆದ ತಿಂಗಳು ಇಲ್ಲಿಗೆ ಭೇಟಿ ನೀಡಿದ್ದ ಆಸ್ಪತ್ರೆ ಅಧಿಕಾರಿಗಳು ತಪಾಸಣೆ ನಡೆಸಿ ಮೆಚ್ಚುಗೆ ಸೂಚಿಸಿದ್ದಾರೆ. ಶಾಸಕರ ಮಾರ್ಗದರ್ಶನದಲ್ಲಿ ಆಸ್ಪತ್ರೆ ಸುವ್ಯವಸ್ಥೆಯೊಂದಿಗೆ ಕಾರ್ಯನಿರ್ವಹಿಸುತ್ತಿದೆ ಎಂದರು.

ಶಾಸಕ ಟಿ.ರಘುಮೂರ್ತಿ ಮಾತನಾಡಿ, ಈಗ ಹಾಲಿ ಇರುವ ಎಲ್ಲಾ ಸೌಲಭ್ಯಗಳನ್ನು ಸಮಯೋಚಿತವಾಗಿ ಉಪಯೋಗಿಸಿಕೊಳ್ಳಬೇಕು. ಯಾವುದೇ ಶುಲ್ಕವನ್ನು ಹೆಚ್ಚಿಸುವುದು ಬೇಡ, ಕಣ್ಣಿನ ವೈದ್ಯರು ಹೊರತು ಪಡಿಸಿ ಎಲ್ಲಾ ವಿಭಾಗಗಳಲ್ಲೂ ವೈದ್ಯರು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಆಸ್ಪತ್ರೆಗೆ ಬರುವ ರೋಗಿಗೆ ಯಾವುದೇ ಸಮಯದಲ್ಲಾದರೂ ಉತ್ತಮ ಚಿಕಿತ್ಸೆ ನೀಡುವ ವ್ಯವಸ್ಥೆ ಆಗಬೇಕು. ಸಾರ್ವಜನಿಕರಿಂದ ದೂರುಗಳು ಬಂದರೂ ಆಡಳಿತಾಧಿಕಾರಿಗಳು ಸೂಕ್ತಕ್ರಮ ಕೈಗೊಂಡು ಮಾಹಿತಿ ನೀಡಬೇಕು ಎಂದರು.

ಆರೋಗ್ಯ ರಕ್ಷಾ ಸಮಿತಿ ಸದಸ್ಯರಾದ ನಿವೃತ್ತಪ್ರಾಂಶುಪಾಲಎಂ.ಕರಿಯಪ್ಪ,ನಿವೃತ್ತ ಕಂದಾಯಾಧಿಕಾರಿ ಮೂಡಲಗಿರಿಯಪ್ಪ, ನಿವೃತ್ತ ಹಿರಿಯ ಫಾರ್ಮಸ್ಟೀಸ್ ಎನ್.ಪ್ರೇಮಕುಮಾರ್, ಶಿವಸ್ವಾಮಿ, ಉಷಾ, ವಿಶ್ವನಾಥ, ಆದಿಶೇಷ, ವೈದ್ಯರಾದ ಮಂಜಪ್ಪ, ಆದಿಮನಿ, ಪ್ರಜ್ವಲ್‌ಧನ್ಯ, ಅಮೀತ್‌ಗುಪ್ತ, ಆರ್.ವೆಂಕಟೇಶ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಬಾಲ್ಯ ವಿವಾಹ ಪ್ರಕರಣ ದಾಖಲು

» ಚಿತ್ರದುರ್ಗ

ಚಳ್ಳಕೆರೆ ತಾಲ್ಲೂಕಿನ ಕೆರೆಹಿಂದಲಹಟ್ಟಿ ಗ್ರಾಮದ ಗಂಟೆ ಮಾರಮ್ಮನ ದೇವಸ್ಥಾನದಲ್ಲಿ ಅಪ್ರಾಪ್ತ ಬಾಲಕಿಯನ್ನು ಮದುವೆಯಾದ ಚಿಕ್ಕಮ್ಮನಹಳ್ಳಿಯ ಬಾಬು.ಸಿ ವಿರುದ್ದ ಬಾಲ್ಯ ವಿವಾಹ ಪ್ರಕರಣ ದಾಖಲಿಸಲಾಗಿದೆ. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಗಮನಕ್ಕೆ ಬಾಲ್ಯ ವಿವಾಹದ ಕುರಿತು ಮಾಹಿತಿ ಬಂದಿತ್ತು. ಕೂಡಲೇ ಆಗಸ್ಟ್ 27 ರಂದು ತಳಕು ಪೊಲೀಸ್ ಠಾಣೆಯಲ್ಲಿ ಆರೋಪಿ ವಿರುದ್ದ ಪೋಕ್ಸೋ ಹಾಗೂ ಬಾಲ್ಯವಿವಾಹ ನಿಷೇದ ಕಾಯ್ದೆ–2006ರ ಪ್ರಕಾರ ಚಳ್ಳಕೆರೆ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹಾಗೂ ತಳಕು ವೃತ್ತದ ಮಹಿಳಾ ಮೇಲ್ವಿಚಾರಕಿ ಎಫ್.ಐ.ಆರ್ ದಾಖಲಿಸಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ತಿಳಿಸಿದ್ದಾರೆ.

### ಸೆ.೯ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಸಮನ್ವಯ ಸಮಿತಿ ಸಭೆ

» ಚಿತ್ರದುರ್ಗ

ಜಿಲ್ಲಾಡಳಿತ ವತಿಯಿಂದ ಸೆ.15 ರಂದು ಆಯೋಜಿಸಲಾಗಿರುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಪ್ರಯುಕ್ತ ಯೋಜನಾ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅಧ್ಯಕ್ಷತೆಯಲ್ಲಿ ಸೆ.9ರಂದು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳೊಂದಿಗೆ ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಅಂದು ಬೆಳಿಗ್ಗ 11 ಗಂಟೆಗೆ ಮೊಳಕಾಲ್ಮೂರು ತಾಲ್ಲೂಕಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ, ಮಧ್ಯಾಹ್ನ 12ಕ್ಕೆ ಚಳ್ಳಕೆರೆ ತಾಲ್ಲೂಕಿನ ತಾಲ್ಲೂಕು ಪಂಚಾಯತಿ ಕಾರ್ಯಾಲಯದಲ್ಲಿ ಹಾಗೂ ಮಧ್ಯಾಹ್ನ 3 ಗಂಟೆಗೆ ಹಿರಿಯೂರು ತಾಲ್ಲೂಕಿನ ನಗರಸಭೆ ಕಾರ್ಯಾಲಯದಲ್ಲಿ ಸಮಿತಿ ಸಭೆ ಜರುಗಲಿವೆ. ಸಭೆಗೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ತಾಲ್ಲೂಕು ಸಮಿತಿಗಳ ಸದಸ್ಯರು ಅಗತ್ಯ ಮಾಹಿತಿಯೊಂದಿಗೆ ಹಾಜರಾಗುವಂತೆ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.

### ಆಕ್ಷೇಪಣೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಪ್ರಕೃತಿ ವಿಕೋಪಗಳಾದ ಪ್ರವಾಹ, ಅತಿವೃಷ್ಠಿಯಿಂದ ಜಿಲ್ಲೆಯಲ್ಲಿ ಉಂಟಾದ ಬೆಳೆ ಹಾನಿಗೆ ಪರಿಹಾರವನ್ನು ಪಾವತಿಸುವ ಕುರಿತಂತೆ ಬೆಳೆ ಹಾನಿಯಾದ ರೈತರ ಮಾಹಿತಿಯನ್ನುಜಿಲ್ಲಾಧಿಕಾರಿಗಳಕಚೇರಿಸೇರಿದಂತೆ ಉಪವಿಭಾಗಾಧಿಕಾರಿಗಳು, ತಹಶೀಲ್ದಾರ್ ಕಚೇರಿ ಹಾಗೂ ಗ್ರಾಮ ಪಂಚಾಯಿತಿ, ರೈತಸಂಪರ್ಕ ಕೇಂದ್ರಗಳಲ್ಲಿ ಸೆ.5 ರಂದು ಪ್ರಕಟಿಸಲಾಗಿದೆ. ಈ ಕುರಿತು ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ಸಂಬಂಧಿಸಿದ ತಹಶೀಲ್ದಾರ್ ಕಚೇರಿ, ಕೃಷಿ, ತೋಟಗಾರಿಕೆ ಇಲಾಖೆಗಳಲ್ಲಿ 7 ದಿನದೊಳಗಾಗಿ ಅರ್ಜಿ ಸಲ್ಲಿಸಬೇಕೆಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಗಂಗಾಧರಸ್ವಾಮಿ.ಜಿ.ಎಂ ಇವರು ತಿಳಿಸಿದ್ದಾರೆ.

### ಜಿಮ್ ಸ್ಥಾಪನೆಗೆ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

» ದಾವಣಗೆರೆ

2024–25ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಅಂತರಾಷ್ಟ್ರೀಯ ಮತ್ತು ರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾಕೂಟದಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಕ್ರೀಡಾಪಟುಗಳಿಗೆ ಸ್ವಯಂ ಉದ್ಯೋಗ ಹೊಂದಲು ಜಿಮ್ ಸ್ಥಾಪನೆಗಾಗಿ ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಇಲ್ಲಿ ಪಡೆದು ಸೆ.20 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08192–237480 ಸಂಪರ್ಕಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಜಯಲಕ್ಷ್ಮೀಬಾಯಿ ತಿಳಿಸಿದ್ದಾರೆ.

### ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತಸಾಲಿಗೆದಾವಣಗೆರೆಜಿಲ್ಲೆಚನ್ನಗಿರಿತಾ.ಕೆರೆಬಿಳಚಿ ಗ್ರಾಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜಿಗೆ ಉರ್ದು ಭಾಷಾ ಭೋದಿಸಲು ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ಸೆ.10 ರೊಳಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ದಾವಣಗೆರೆ ಹಾಗೂಪ್ರಾಂಶುಪಾಲರು, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜು, ಕೆರೆಬಿಳಚಿ ಗ್ರಾಮ, ಚನ್ನಗಿರಿ ತಾ॥ ಕೆರೆಬಿಳಚಿ ಇವರಿಗೆ ಅರ್ಜಿಯನ್ನು ಸಲ್ಲಿಸಬಹುದು.

# ಜಿಲ್ಲಾ ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ಚಾಲನೆ

» ಚಿತ್ರದುರ್ಗ




ಭಾರತೀಯ ಜನತಾ ಪಕ್ಷ ವಿಶ್ವದಲ್ಲಿಯೇ ಅತಿ ಹೆಚ್ಚು ಸದಸ್ಯರಿರುವ ದೊಡ್ಡ ಪಕ್ಷ, ಕಳೆದ ಬಾರಿ 7 ಕೋಟಿ ಜನರು ಬಿಜೆಪಿ ಸದಸ್ಯತ್ವ ಪಡೆದುಕೊಂಡಿದ್ದರು. ಈ ಬಾರಿ 10 ಕೋಟಿ ಸದಸ್ಯರನ್ನು ಮಾಡುವ ಗುರಿಯೊಂದಿಗೆ ನಮ್ಮ ರಾಷ್ಟ್ರೀಯ ನಾಯಕರು ಅಭಿಯಾನಕ್ಕೆ ಚಾಲನೆ ನೀಡಿದ್ದಾರೆ ಎಂದು ಸಂಸದರಾದ ಗೋವಿಂದ ಕಾರಜೋಳ ತಿಳಿಸಿದರು.

ಅವರು ಗುರುವಾರ ಚಿತ್ರದುರ್ಗದ ಭಾರತೀಯ ಜನತಾ ಪಕ್ಷದವತಿಯಿಂದ ಏರ್ಪಡಿಸಿದ್ದ ಚಿತ್ರದುರ್ಗ ಗ್ರಾಮಾಂತರ ಸದಸ್ಯತ್ವ ಅಭಿಯಾನದಲ್ಲಿ ಪಾಲ್ಗೊಂಡು ಅವರು ಮಾತನಾಡಿ ನರೇಂದ್ರ ಮೋದಿಯವರು ಸತತ ಮೂರನೇ ಬಾರಿಗೆ ಪ್ರಧಾನಿಯಾಗಿದ್ದಾರೆ. ಮುಂಬರುವ ವಿಧಾನಸಭಾ ಚುನಾವಣೆಗಳಲ್ಲಿ ಬಿಜೆಪಿ ಜಯಭೇರಿ ಭಾರಿಸಿ ಮತ್ತೆ ಅಧಿಕಾರ ಹಿಡಿಯಲಿದೆ. ಕೇಂದ್ರದಲ್ಲಿಯೂ ಬಿಜೆಪಿ ಅಧಿಕಾರಕ್ಕೆ ಬಂದು ಮೋದಿಯವರು ನಾಲ್ಕನೇ ಬಾರಿಗೂ ಪ್ರಧಾನಿಯಾಗುತ್ತಾರೆ. ಪಂಡಿತ್ ಜವಾಹರಲಾಲ್ ನೆಹರು ಅವರ ನಂತರ ಸತತ ಮೂರನೆ ಬಾರಿಗೆ ಪ್ರಧಾನಿಯಾಗಿರುವ ದಾಖಲೆ ಇವರದ್ದಾಗಿದೆ. ಪ್ರಧಾನಿ ನರೇಂದ್ರ ಮೋದಿ, ಗೃಹಸಚಿವ ಅಮಿತ್ ಶಾ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರ ನೇತೃತ್ವದಲ್ಲಿ ಅತ್ಯಂತ ಬಲಿಷ್ಠವಾಗಿ ಬೆಳೆಯುತ್ತಿರುವ ಪಕ್ಷ ಬಿಜೆಪಿ. ವಿರೋಧ ಪಕ್ಷಗಳು ಎಷ್ಟೇ ಅಪಪ್ರಚಾರ ಮಾಡಿದರೂ ಭಾರತದ ಜನ ಹಾಗೂ ಕರ್ನಾಟಕದ ಜನರು ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಯನ್ನು ಬೆಂಬಲಿಸಿದ್ದರಿಂದ ಅತ್ಯಂತ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ ಎಂದರು.

ಬಿಜೆಪಿಯ ಸದಸ್ಯತ್ವ ನೋಂದಣಿಯು 2 ಹಂತಗಳಲ್ಲಿ 45 ದಿನಗಳ ಕಾಲ ನಡೆಯುವ ಅಭಿಯಾನದಲ್ಲಿ ಈ ಬಾರಿ ರಾಜ್ಯದಲ್ಲಿ ಬಿಜೆಪಿ ಸದಸ್ಯತ್ವ ನೋಂದಣಿಯು ದಾಖಲೆ ಆಗಲಿದೆ ಕಳೆದ ಬಾರಿ 1.04 ಕೋಟಿ ಸದಸ್ಯರ ನೋಂದಣಿ ಆಗಿತ್ತು. ಅದನ್ನು ಮೀರಿ ಸದಸ್ಯತ್ವ ನೋಂದಣಿ ಮಾಡುವ ಸಂಕಲ್ಪ ನಮ್ಮದು. ಪ್ರತಿಯೊಂದು ಬೂತ್‌ನಲ್ಲಿ ಕನಿಷ್ಠ 300 ರಿಂದ 400 ಸದಸ್ಯರನ್ನು ಮಾಡುವ ಗುರಿ ಇದೆ ಎಂದು ತಿಳಿಸಿದ ಸಂಸದರು ಕಾಂಗ್ರೆಸ್ ಪಕ್ಷವು ನಾಯಕರ ಪಕ್ಷ, ನಮ್ಮದು ಕಾರ್ಯಕರ್ತರ ಪಕ್ಷ. ಸದಸ್ಯತ್ವವನ್ನು ಹೆಚ್ಚು ಮಾಡಬೇಕಿದೆ. ಅದಕ್ಕಾಗಿ ಬೀದಿಗೆ ಇಳಿಯಬೇಕು ಎಂದರು.

ಕೇಂದ್ರ 2047ರ ವೇಳೆಗೆ ಭಾರತವನ್ನು ವಿಕಸಿತ ರಾಷ್ಟ್ರವಾಗಿ, ಅಭಿವೃದ್ಧಿ ಹೊಂದಿದ ದೇಶವಾಗಿ ಮಾಡುವ ಕನಸು ಪ್ರಧಾನಿ ನರೇಂದ್ರ ಮೋದಿ ಅವರದಾಗಿದೆ. ಅವರಿಗೆ ಇನ್ನೂ ಹೆಚ್ಚು ಬಲ ಕೊಡುವ ಕೆಲಸ ನಡೆಸಬೇಕಿದೆ. ಅಭಿಯಾನದ ಯಶಸ್ವಿಗಾಗಿ ಪ್ರತಿ ಬೂತ್‌ಗಳಲ್ಲಿ ಕಾರ್ಯಕರ್ತರನ್ನು ಜೋಡಿಸಲಾಗಿದೆ. ದೇಶ ಮೊದಲು, ನಂತರ ಪಕ್ಷ ಉತ್ತಮ ಸಿದ್ಧಾಂತವನ್ನು ಬಿಜೆಪಿ ಹೊಂದಿದೆ ಎಂದು ತಿಳಿಸಿದರು.

ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿ ಮಾತನಾಡಿ, ಅಟಲ್ ಬಿಹಾರಿ ವಾಜಪೇಯಿ ಅವರ 100ನೇ ಜನ್ಮದಿನದ ಆಚರಣೆಯ ಈ ಸಂದರ್ಭದಲ್ಲಿ ಸದಸ್ಯತ್ವ ಅಭಿಯಾನದ ಜೊತೆ ಜೊತೆಗೇ ಪ್ರಧಾನಿ ಮೋದಿ ಅವರ 2047ನೇ ಇಸವಿಗೆ ಭಾರತವನ್ನು ವಿಕಸಿತ ರಾಷ್ಟ್ರವಾಗಿ, ಅಭಿವೃದ್ಧಿ ಹೊಂದಿದ ದೇಶವಾಗಿ ಪರಿವರ್ತನೆ ಮಾಡುವ ಸಂಕಲ್ಪಕ್ಕೆ ದೊಡ್ಡ ಶಕ್ತಿ ತುಂಬಲು ಸಮಾಜದ ವಿವಿಧ ಸ್ತರದ ಎಲ್ಲರನ್ನು, ಬೇರೆ ಬೇರೆ ಕ್ಷೇತ್ರದವರನ್ನು ಗುರುತಿಸಿ ಎಲ್ಲರನ್ನೂ ಸದಸ್ಯತ್ವದ ಅಭಿಯಾನದಲ್ಲಿ ನೋಂದಣಿ ಮಾಡುವ ಗುರಿ ಇದೆ ಎಂದರು.

1980ರಲ್ಲಿ ಶೇ.1 ಮತ ಪಡೆದರೆ ಖುಷಿ ಪಡುವ ಪಕ್ಷ ನಮ್ಮದಾಗಿತ್ತು. ಇದೀಗ ಪ್ರಜಾಪ್ರಭುತ್ವ ರಾಷ್ಟ್ರಗಳಲ್ಲೇ ಅತಿ ಹೆಚ್ಚು ಸದಸ್ಯರನ್ನು ಹೊಂದಿದ ಪಕ್ಷ ಬಿಜೆಪಿ. ನಮ್ಮ ಶಕ್ತಿ ಈಗ ಏರುಮುಖವಾಗುತ್ತಿದೆ, ಕಾಂಗ್ರೆಸ್ ಪಕ್ಷದ ಆಡಳಿತವುಳ್ಳ ರಾಜ್ಯಗಳು ಇಳಿಮುಖವಾಗುತ್ತಿವೆ. ಪ್ರಜಾತಂತ್ರಕ್ಕೆ ಬಲ ತುಂಬಿದ್ದು ಬಿಜೆಪಿ ದೇಶದಲ್ಲಿ ನೂರಾರು ಪಕ್ಷಗಳಿದ್ದರೂ ಪ್ರಜಾತಂತ್ರ ವ್ಯವಸ್ಥೆಗೆ ಬಲ ತುಂಬಿರುವುದು ಬಿಜೆಪಿ ಪಕ್ಷ ಮಾತ್ರ ಮೂರನೇ ಬಾರಿಗೆ ಪ್ರಧಾನಿಯಾಗಿರುವ ನರೇಂದ್ರ ಮೋದಿಯವರು ಭಾರತವನ್ನು ವಿಶ್ವದಲ್ಲೇ ಅತ್ಯಂತ ಶಕ್ತಿಶಾಲಿಯಾಗಿಸುವ ಮೂಲಕ ಜಗತ್ತಿನಲ್ಲಿ ಅಧಿಕವಾಗಿ ಮೂರನೇ ಸ್ಥಾನಕ್ಕೇರಿಸಲು ಪಣ ತೊಟ್ಟಿದ್ದಾರೆ. ಅವರಿಗೆ ನಾವು ಬಲ ತುಂಬಬೇಕಿದೆ ಒಂದು ಪಕ್ಷ ಬಹುಬೇಗನೇ ಸಂಘಟನೆಯಾಗಿ ಬಲಿಷ್ಠ ಪಕ್ಷವಾಗಿ ಹೊರಹೊಮ್ಮಬೇಕಾದರೆ ಅದಕ್ಕೆ ಕಾರ್ಯಕರ್ತರ ಶ್ರಮ, ಕಾರ್ಯಕರ್ತರ ತನುಮನದಿಂದ ಪಕ್ಷ ಇಷ್ಟೊಂದು ಅದ್ಭುತ ಸಾಧನೆ ಮಾಡಿದೆ ಎಂದರು.

ಇಡೀ ರಾಜ್ಯದಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನ ನಡೆಯುತ್ತಿದೆ. ಈ ಬಾರಿ ಜಿಲ್ಲೆಯಲ್ಲಿ ಅತೀ ಹೆಚ್ಚು ಸದಸ್ಯತ್ವನ್ನು ನಮ್ಮ ಜಿಲ್ಲೆ ಹೊಂದಬೇಕು. ಆ ನಿಟ್ಟಿನಲ್ಲಿ ನಾವೆಲ್ಲರೂ ಸದಸ್ಯತ್ವ ಅಭಿಯಾನದಲ್ಲಿ ಪಾಲ್ಗೊಳ್ಳೋಣ. ಸಿದ್ಧಾಂತಕ್ಕಾಗಿ ಯಾವುದಾದರೂ ಮಂತ್ರಿ, ಮುಖ್ಯಮಂತ್ರಿ, ಪ್ರಧಾನಿ, ಉಪಪ್ರಧಾನಿ ಪಕ್ಷ ಇದ್ದರೆ ಅದು ಬಿಜೆಪಿ ಮಾತ್ರ. ದೇಶಭಕ್ತಿ ಸೇರಿದಂತೆ ಹಲವಾರು ಜವಾಬ್ದಾರಿಗಳನ್ನು ಹಾಗೂ ಸಂಘ ಪರಿವಾರದ ಸಂಸ್ಕಾರದಿಂದ ನಿರ್ವಹಿಸಿದರು. ಇದಕ್ಕೆ ಕಾರಣ ಪಕ್ಷದ ಸಿದ್ಧಾಂತ ಹಿಂದುತ್ವವನ್ನೇ ಉಸಿರಾಗಿಸಿಕೊಂಡು ಹಾಗೂ ಪಕ್ಷ ಸಂಘಟನೆಗೆ ಹೆಚ್ಚು ನೀಡಿದಕ್ಕಾಗಿ ತನಗಾಗಿ ಏನನ್ನೂ ಬಯಸದೆ ಪಕ್ಷಕ್ಕಾಗಿ ದುಡಿದ ಮಹನಿಯರೂ ಕೂಡ ಬಿಜೆಪಿಯಲ್ಲಿ ಮಾತ್ರ ಸಿಗುತ್ತಾರೆ ಎಂದರು, ಕಾರ್ಯಕರ್ತರ ಆಧಾರಿತವಾದ ನಮ್ಮ ಪಕ್ಷಕ್ಕೆ ಕಾರ್ಯಕರ್ತರೆ ಆಧಾರಸ್ಥಂಭವಾಗಿದ್ದಾರೆ ಎಂದು ತಿಳಿಸಿದರು

ಈ ಸಂದರ್ಭದಲ್ಲಿ ಜಿಲ್ಲಾದ್ಯಕ್ಷರಾದ ಎ ಮುರಳಿ ಪ್ರಧಾನಕಾರ್ಯದರ್ಶಿಗಳಾದ ಸುರೇಶ್ ಸಿದ್ದಾಪುರ ಸಂಪತ್ ಕುಮಾರ್ ರೈತಮೋರ್ಚ ರಾಜ್ಯ ಕಾರ್ಯದರ್ಶಿ ಮಲ್ಲಿಕಾರ್ಜುನ್ ಗ್ರಾಮಾಂತರ ಅದ್ಯಕ್ಷ ಕಲ್ಲೇಶಯ್ಯ ಮಹಿಳಾ ಮೋರ್ಚಾ ಅದ್ಯಕ್ಷೆ ಶೈಲಜಾರೆಡ್ಡಿ ವೀರೇಶ ಜಾಲಿಕಟ್ಟೆ ದಗ್ಗೆ ಶಿವಪ್ರಕಾಶ್, ಸುರೇಶ್,ವಸಂತ ,ಸತ್ಯನಾರಾಯಣ, ವೀಣಾ ಶೀಲಾ, ಶಾಂತಮ್ಮಕಾಂಚನಾಗ್ರಾಮಾಂತರಘಟಕದ ಪಧಾದಿಕಾರಿಗಳು ಉಪಸ್ಥಿತರಿದ್ದರು

# ಐಮಂಗಲದ ಪೊಲೀಸ್ ತರಬೇತಿ ಶಾಲೆಯಲ್ಲಿ ನೇತ್ರದಾನ ಪಾಕ್ಷಿಕ ಜಾಗೃತಿ ಕಾರ್ಯಕ್ರಮ

» ಚಿತ್ರದುರ್ಗ



ನಮ್ಮ ಕಣ್ಣುಗಳನ್ನು ದಾನ ಮಾಡುವುದು. ನಿಸ್ವಾರ್ಥ ಸೇವೆಯಾಗಿದೆ. ದೃಷ್ಟಿ ಸಮಸ್ಯೆಯಿಂದ ಬಳಲುತ್ತಿರುವ ಅಂಧರ ಬಾಳಲ್ಲಿ ಸಹಾಯ ಮಾಡಲು ಸಾವಿನ ನಂತರ ನಮ್ಮ ಅಮೂಲ್ಯವಾದ ಕಣ್ಣುಗಳನ್ನು ದಾನ ಮಾಡುವುದೇ ನೇತ್ರ ದಾನವಾಗಿದೆ. ನೇತ್ರದಾನ ಮಾಡುವುದರಿಂದ ಸಾವಿನ ನಂತರವೂ ಜಗತ್ತನ್ನು ನೋಡುವ ಸುಂದರ ಅವಕಾಶವಿದೆ ಎಂದು ಬಸವೇಶ್ವರ ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ನೇತ್ರ ತಜ್ಞರಾದ ಡಾ ॥ ಅನುಶ್ರೀ ತಿಳಿಸಿದರು.

ಬಸವೇಶ್ವರ ಪುನರ್ ಜ್ಯೋತಿ ಐ ಬ್ಯಾಂಕ್(ರಿ)ಬಸವೇಶ್ವರ ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಮತ್ತು ಜಿಲ್ಲಾ ಪೊಲೀಸ್ ತರಬೇತಿ ಶಾಲೆ. ಐಮಂಗಲ ಇವರುಗಳ ಸಹಯೋಗದಲ್ಲಿ 39 ನೇ ರಾಷ್ಟ್ರೀಯ ನೇತ್ರದಾನ ಪಾಕ್ಷಿಕ 2024ರ ಅಂಗವಾಗಿ ಐಮಂಗಲದ ಜಿಲ್ಲಾ ಪೊಲೀಸ್ ತರಬೇತಿ ಶಾಲೆ ಸಭಾಂಗಣದಲ್ಲಿ ಹ್ಮಮಿಕೊಂಡಿದ್ದ ನೇತ್ರದಾನದ ಬಗ್ಗೆ ಪೊಲೀಸ್ ತರಬೇತಿಗಳಿಗೆ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಾವಿನ ನಂತರವೂ ಜಗತ್ತನ್ನು ನೋಡುವ ಅವಕಾಶ ಕಲ್ಪಿಸುವ ನೇತ್ರದಾನ ಅತ್ಯಂತ ಶ್ರೇಷ್ಠವಾದುದು. ನೇತ್ರದಾನದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ವ್ಯಕ್ತಿಯ ಸಾವಿನ ಜೊತೆಗೆ ಮಣ್ಣಾಗುವ ಕಣ್ಣುಗಳನ್ನು ದಾನಮಾಡಿ ಅಂಧರಿಗೆ ನೆರವಾಗಬೇಕಿದೆ. ನೇತ್ರದಾನ ಮಾಡುವುದರಿಂದ ಅಂಧರ ಬಾಳಿಗೆ ಬೆಳಕು ಮೂಡಿಸುವ ಉದ್ದೇಶದಿಂದ ಪ್ರತಿವರ್ಷ ರಾಷ್ಟ್ರೀಯ ನೇತ್ರದಾನ ಪಾಕ್ಷಿಕವನ್ನು ಆಚರಿಸಲಾಗುತ್ತದೆ. ಮರಣದ ನಂತರ ನೇತ್ರದಾನ ಮಾಡುವುದರ ಮೂಲಕ ಜೀವಂತವಾಗಿರೋಣ ಎಂದರು.ಬಸವೇಶ್ವರ ಪುನರ್‌ಜ್ಯೋತಿ ಐ ಬ್ಯಾಂಕಿನ ಸಂಚಾಲಕರಾದ ರೋಟರಿಯನ್ ವೀರೇಶ್ ಮಾತನಾಡಿ, 'ನಿಸ್ವಾರ್ಥಿಯಾಗಿ ಕಣ್ಣುಗಳನ್ನು ದಾನ ಮಾಡುವತ್ತ ಎಲ್ಲರೂ ಗಮನ ಹರಿಸಬೇಕು. ನೇತ್ರದಾನದ ಬಗ್ಗೆ ಜಾಗೃತಿ ಮೂಡಿಸುವಉದ್ದೇಶದಿಂದಪ್ರತಿವರ್ಷರಾಷ್ಟ್ರೀಯ ನೇತ್ರದಾನ ಪಾಕ್ಷಿಕ ಆಚರಿಸಲಾಗುತ್ತದೆ. ಮರಣದ ನಂತರ ನೇತ್ರದಾನ ಮಾಡುವುದರ ಮೂಲಕ ಜೀವಂತವಾಗಿರೋಣ' 'ಸಂಸ್ಥೆಯ ವತಿಯಿಂದ 1,800 ಅಂಧ ವ್ಯಕ್ತಿಗಳಿಗೆ ದೃಷ್ಟಿ ನೀಡಲಾಗಿದೆ. ನಿಮ್ಮ ಸಂಬಂಧಿಕರು ಯಾರಾದರೂ ಮೃತಪಟ್ಟರೆ ನಮ್ಮ ಮೊಬೈಲ್ ಸಂಖ್ಯೆಗೆ ಕರೆ ಮಾಡಿದರೆ ತಕ್ಷಣವೇ ಕಣ್ಣುಗಳನ್ನು ಸಂಗ್ರಹಿಸಿ ಅವಶ್ಯಕತೆ ಇರುವವರಿಗೆ ತಲುಪಿಸಲಾಗುತ್ತದೆ. ನಾವೆಲ್ಲರೂ ನೇತ್ರದಾನದ ಬಗ್ಗೆ ಜಾಗೃತಿ ಮೂಡಿಸೋಣ' ಎಂದು ಹೇಳಿದರು.

ದೇಶದಲ್ಲಿ ಇನ್ನೂ ನೇತ್ರದಾನದ ಬಗ್ಗೆ ಹೆಚ್ಚಿನ ಜಾಗೃತಿ ಇಲ್ಲ. ನೇತ್ರದಾನ ಸಾರ್ವಕಾಲಿಕ ಶ್ರೇಷ್ಠದಾನ. ಯಾವುದೇ ಆರೋಗ್ಯವಂತ ವ್ಯಕ್ತಿ ನೇತ್ರದಾನ ಮಾಡಬಹುದು. ನಾವೆಲ್ಲರೂ ಜೀವಂತವಾಗಿರುವಾಗ ನೇತ್ರದಾನ ಮಾಡಲು ತನ್ನನ್ನು ನೋಂದಾಯಿಸಿಕೊಳ್ಳಬಹುದು ನೇತ್ರ ದಾನಿಯಾಗಲು ಬಸವೇಶ್ವರ ಪುನರ್‌ಜ್ಯೋತಿ ಐ ಬ್ಯಾಂಕ್ ಅನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಐಮಂಗಲದ ಜಿಲ್ಲಾ ಪೊಲೀಸ್ ತರಬೇತಿ ಶಾಲೆಯ ಖ.ಕ.ಮತ್ತು ಪ್ರಾಶುಂಪಾಲರಾದ ಪಿ.ಪಾಪಣ್ಣ ಮಾತನಾಡಿ, ನೇತ್ರದಾನ ಮಹಾದಾನ ವ್ಯರ್ಥ ಮಾಡದೇ ಮೃತ ವ್ಯಕ್ತಿಯ ಕಣ್ಣುಗಳನ್ನು ದಾನ ಮಾಡಿ ಇಬ್ಬರ ಅಂಧರ ಬದುಕಿಗೆ ದೃಷ್ಟಿ ನೀಡೋಣ ನೇತ್ರದಾನ ಒಂದು ಮಹಾ ದಾನವಾಗಿದೆ. . ಸತ್ತ ನಂತರ ಕಣ್ಣುಗಳನ್ನು ಮಣ್ಣಲ್ಲಿ ಮಣ್ಣಾಗಿಸಿ ಅಥವಾ ಅಗ್ನಿ ಸ್ಪರ್ಶ ಮಾಡಿ ಸುಡುವುದು ಬೇಡ ದಾನ ಮಾಡುವುದರಿಂದ ಇನನೂಬ್ಬರಿಗೆ ನೆರವಾಗುತ್ತದೆ. ಕರ್ತವ್ಯ ಸಮಯದಲ್ಲಿ ಎಲ್ಲಿಯಾದರೂ ಅಫಘಾತವಾದಾಗ ಅವರ ಸಂಬಂಧಿಗಳು ಇದ್ದರೆ ಅವರನ್ನು ಕೇಳಿ ಕಣ್ಣುಗಳನ್ನು ದಾನ ಮಾಡಿಸುವ ಕಾರ್ಯವನ್ನು ಮಾಡಿ ಇದರಿಂದ ಪುಣ್ಯ ಬರುತ್ತದೆ ಎಂದರು.

## ಗ್ರಾಮೀಣ ಪ್ರದೇಶದ ಪೋಷಕರ ಮನಃಸ್ಥಿತಿ ಬದಲಾಗಬೇಕು: ಶಾಸಕ



» ಹೊಸದುರ್ಗ

ಶಿಕ್ಷಣದ ಬುನಾದಿ ಪ್ರಾಥಮಿಕ ಶಾಲಾ ಶಿಕ್ಷಕರು ಉತ್ತಮ ಗುಣಮಟ್ಟದ ಶಿಕ್ಷಣ ನೀಡಿದರೆ, ದೇಶದ ಸತ್ಪ್ರಜೆ ಆಗುವರು. ಸರ್ಕಾರಿ ಶಾಲೆಯಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿದೆ ಗ್ರಾಮೀಣ ಪ್ರದೇಶದ ಪೋಷಕರ ಮನಃಸ್ಥಿತಿ ಬದಲಾಗಬೇಕು ಎಂದು ಶಾಸಕ ಆಹಾರ ನಿಗಮದ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ ಹೇಳಿದರು.ಪಟ್ಟಣದ ಶ್ರೀ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ಡಾ.ಸರ್ವೆಪಲ್ಲಿ ರಾಧಾಕೃಷ್ಣನ್ ಜಯಂತಿ ಹಾಗೂ ಶಿಕ್ಷಕರ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು. ಶಾಲೆಗಳಲ್ಲಿ ಸರ್ಕಾರದ ಯೋಜನೆಗಳ ಅನುಷ್ಠಾನ ಯಶಸ್ವಿಯಾದಾಗ ಮಕ್ಕಳ ಸಂಖ್ಯೆ ಹೆಚ್ಚಲಿದೆ ಸರ್ಕಾರ ಪ್ರಾಥಮಿಕ ಶಾಲೆಗಳ ಗುಣಾತ್ಮಕ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದು ಹೆಚ್ಚಿನ ಅನುದಾನ ನೀಡುತ್ತಿದೆ ಎಂದರು. ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ; ಬಂಜಗೆರೆ ಜಯಪ್ರಕಾಶ್ ಉಪನ್ಯಾಸ ನೀಡಿ ಮಾತನಾಡಿ ಸಂವಿಧಾನ ಆಶಯಗಳ ಹೊರತಾಗಿ ರಾಷ್ಟ್ರ ನಿರ್ಮಾಣಕ್ಕೆ ಬೇರೆ ತಳಹದಿ ಇಲ್ಲ. ಶಿಕ್ಷಣದಿಂದ ಮೌಢ್ಯ, ಅಜ್ಞಾನ, ದ್ವೇಷ ಬದಲಾವಣೆ ಸಾಧ್ಯ. ಮಕ್ಕಳ ಭವಿಷ್ಯಕ್ಕೆ. ವಿದ್ಯಾರ್ಥಿಗಳಲ್ಲಿ ಮೌಲ್ಯ ಪ್ರಜ್ಞೆ ತುಂಬಬೇಕು. ಸುಂದರ ಸಮಾಜ ನಿರ್ಮಾಣ ಆಗುತ್ತೆ. ಶಾಲೆಗಳಲ್ಲಿ ಧಾರ್ಮಿಕತೆ ಅವಕಾಶವಿಲ್ಲ ಶಿಕ್ಷಣಕ್ಕೆ ಸಂಬಂಧಪಟ್ಟ ವಿಷಯಗಳನ್ನು ನೇರವೇರಿಸಬೇಕು. ರಾಷ್ಟ್ರೀಯ ಉಪಯುಕ್ತಕರ ಸಂದೇಶ ನೀಡುವ ರಾಷ್ಟ್ರೀಯ ಹಬ್ಬಗಳನ್ನು ಆಚರಿಸಬೇಕು ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ಪ್ರಾಸ್ತಾವಿಕವಾಗಿ ಮಾತನಾಡಿದರು ತಾಲೂಕು ಕಾರ್ಯನಿರ್ವಹಣಾಧಿಕಾರಿ ಸುನಿಲ್ ಕುಮಾರ್, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಗಂಗಾಧರ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಶಾಂತಪ್ಪ, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಂಜುನಾಥ, ನಿವೃತ್ತ ಉಪನ್ಯಾಸಕ ಲಕ್ಷ್ಮಯ್ಯ ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಜರಿದ್ದರು.

## ಪ್ರಮುಖ ಸುದ್ದಿ

### ವಿಜ್ಞಾನ ಓದಿ ಕರ್ಮಸಿದ್ಧಾಂತ ನಂಬಿದರೆ, ಮೌಢ್ಯಕ್ಕೆ ಜೋತು ಬಿದ್ದರೆ ಅಂಥಾ ಶಿಕ್ಷಣ ನಿರರ್ಥಕ: ಸಿಎಂ

# ರೈತ–ಶಿಕ್ಷಕ–ಸೈನಿಕ ದೇಶದ ನಿರ್ಮಾತೃಗಳು: ಸಿದ್ದರಾಮಯ್ಯ

» ಬೆಂಗಳೂರು



ರೈತರು–ಶಿಕ್ಷಕರು–ಸೈನಿಕರು ದೇಶದ ನಿರ್ಮಾತೃಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣ ಇಲಾಖೆ ಬ್ಯಾಂಕ್ವೆಟ್ ಹಾಲ್ ನಲ್ಲಿ ಭಾರತ ರತ್ನ ಡಾ.ಸರ್ವೆಪಲ್ಲಿ ರಾಧಾಕೃಷ್ಣನ್ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಮತ್ತು ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ದೇಶದ ಎರಡನೇ ರಾಷ್ಟ್ರಾಧ್ಯಕ್ಷರಾಗಿದ್ದ ರಾಧಾಕೃಷ್ಣನ್ ಅವರು ಶ್ರೇಷ್ಠ ಶಿಕ್ಷಕರಾಗಲು ಸಾಧ್ಯವಾಗಿದೆ ಅಂದರೆ, ಇದೇ ಸಾಧ್ಯತೆ ಎಲ್ಲಾ ಶಿಕ್ಷಕರಿಗೂ ಇದ್ದೇ ಇರುತ್ತದೆ. ಹೀಗಾಗಿ ಪ್ರತಿಯೊಬ್ಬ ಶಿಕ್ಷಕರೂ ರಾಧಾಕೃಷ್ಣನ್ ಅವರ ಮಾರ್ಗದಲ್ಲಿ ನಡೆಯಲು ಪ್ರಯತ್ನಿಸಬೇಕು ಎಂದರು.

ಪ್ರತಿಯೊಬ್ಬ ವಿದ್ಯಾರ್ಥಿಯ ವ್ಯಕ್ತಿತ್ವವನ್ನು ರೂಪಿಸುವ ಮೂಲಕ ದೇಶದ ವ್ಯಕ್ತಿತ್ವವನ್ನು ರೂಪಿಸುವವರು ನಮ್ಮ ಶಿಕ್ಷಕರು. ಇದು ಶಿಕ್ಷಕರ ಮೂಲಭೂತ ಜವಾಬ್ದಾರಿ ಎಂದರು.

ಆಕಸ್ಮಿಕವಾಗಿ ಶಿಕ್ಷಕ ವೃತ್ತಿಗೆ ಬಂದವರಿಗಿಂತ ಶಿಕ್ಷಕ ವೃತ್ತಿಯನ್ನು ಆಯ್ಕೆ ಮಾಡಿಕೊಂಡವರೇ ಅತಿ ಹೆಚ್ಚಾಗಿದ್ದಾರೆ. ಹೀಗೆ ಈ ವೃತ್ತಿಯನ್ನು ಆಯ್ಕೆ ಮಾಡಿಕೊಂಡವರ ಬಗ್ಗೆ ನನಗೆ ಹೆಮ್ಮೆ ಎನಿಸುತ್ತದೆ ಎಂದರು.

ವಿದ್ಯಾರ್ಥಿಗಳು ಸ್ವತಂತ್ರವಾಗಿ ಯೋಚಿಸುವಂತೆ ರೂಪಿಸುವುದೇ ಶಿಕ್ಷಕರ ಜವಾಬ್ದಾರಿ. ವೈಜ್ಞಾನಿಕತೆ ಮತ್ತು ವೈಚಾರಿಕತೆಯನ್ನು ವಿದ್ಯಾರ್ಥಿಗಳು ಬೆಳೆಸಿಕೊಂಡರೆ ಮಾತ್ರ ಅವರಿಗೆ ಸಮಾಜ ಅರ್ಥ ಆಗುತ್ತದೆ. ಸಮಾಜದ ಸಮಸ್ಯೆಗಳಿಗೆ ಪರಿಹಾರ ರೂಪಿಸುತ್ತಾರೆ ಎಂದರು.

ವಿಜ್ಞಾನ ಓದಿರುವ ವಿದ್ಯಾರ್ಥಿಗಳೂ ಮೌಢ್ಯಕ್ಕೆ ಜೋತು ಬೀಳುವುದು, ಜಾತಿ ತಾರತಮ್ಯ ಮಾಡುವುದಾದರೆ ಅವರಿಗೆ ಸಿಕ್ಕ ಶಿಕ್ಷಣಕ್ಕೆ ಅರ್ಥ ಇರುವುದಿಲ್ಲ. ಆದ್ದರಿಂದ ವಿದ್ಯಾರ್ಥಿಗಳನ್ನು ವೈಚಾರಿಕವಾಗಿ ರೂಪಿಸುವ ಜವಾಬ್ದಾರಿ ಶಿಕ್ಷಣದ್ದಾಗಿದೆ ಎಂದರು.

ಎಲ್ಲರಿಗೂ ಶಿಕ್ಷಣ ದೊರಕದಂತೆ ತಡೆಯುತ್ತಿದ್ದ ಕಾಲ ಈಗ ಇಲ್ಲ. ಈಗ ಪ್ರತಿಯೊಬ್ಬರಿಗೂ ಶಿಕ್ಷಣ ಕಡ್ಡಾಯಗೊಳಿಸಲಾಗಿದೆ. ಕಡ್ಡಾಯ ಶಿಕ್ಷಣದ ಜೊತೆಗೆ ಅತ್ಯುತ್ತಮ ವ್ಯಕ್ತಿತ್ವಗಳನ್ನು ರೂಪಿಸುವ ರೂವಾರಿಗಳು ನಮ್ಮ ಶಿಕ್ಷಕರು ಎಂದು ಮೆಚ್ಚುಗೆ ಸೂಚಿಸಿದರು.

ಮನುಷ್ಯ ಮನುಷ್ಯನನ್ನು ಪ್ರೀತಿಸುವ ಮಾನವೀಯ ಜವಾಬ್ದಾರಿಯನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವುದು ಶಿಕ್ಷಕರಿಂದ, ಶಿಕ್ಷಣದಿಂದ ಮಾತ್ರ ಸಾಧ್ಯ. 800 ವರ್ಷಗಳ ಹಿಂದೆಯೇ ಕರ್ಮ ಸಿದ್ಧಾಂತವನ್ನು ಬಸವಾದಿ ಶರಣರು ತಿರಸ್ಕರಿಸಿದ್ದರು. ಆದರೂ ಇವತ್ತಿನ ಶಿಕ್ಷಕರೂ ಹಣೆಬರಹ ಮುಂತಾದ ಕರ್ಮಸಿದ್ಧಾಂತವನ್ನು ನಂಬುತ್ತಾರೆ. ಇದು ಸರಿಯಲ್ಲ.

ಸಾವಿತ್ರಿ ಬಾಯಿ ಫುಲೆ, ಸರ್ವಪಲ್ಲಿ ರಾಧಾಕೃಷ್ಣನ್ ಅವರ ಆದರ್ಶಗಳು ಇಡೀ ಶಿಕ್ಷಕ ಸಮುದಾಯಕ್ಕೆ ಮಾದರಿಯಾಗಲಿ ಎಂದು ಹಾರೈಸುತ್ತೇನೆ ಎಂದರು.

ಶಿಕ್ಷಕರ ಸಮಸ್ಯೆಗಳನ್ನು ಶಿಕ್ಷಕರ ಸಂಘದ ಜೊತೆ ಸೇರಿ ಸುದೀರ್ಘವಾಗಿ ಚರ್ಚಿಸಿದ್ದೇನೆ. ಪದವಿಪೂರ್ವ ಶಿಕ್ಷಕರ ಸಮಸ್ಯೆಗಳು ಅರ್ಥವಾಗಿದೆ. ಇವುಗಳಿಗೆ ಪರಿಹಾರ ಕಂಡುಕೊಳ್ಳುವ ಪ್ರಯತ್ನವನ್ನು ಪ್ರಾಮಾಣಿಕವಾಗಿ ಮಾಡುತ್ತೇವೆ ಎಂದು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಸೇರಿ ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರು, ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳು, ಶಿಕ್ಷಕರ ಮತ್ತು ಉಪನ್ಯಾಸಕರ ಸಂಘಟನೆಗಳ ಪದಾಧಿಕಾತಿಗಳು ಉಪಸ್ಥಿತರಿದ್ದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕರಾದ ರಿಜ್ವಾನ್ ಅರ್ಷದ್ ವಹಿಸಿದ್ದರು.

## ಫಾಸ್ಟ್ ನ್ಯೂಸ್

### ಕುರಿ, ಮೇಕೆ, ಕೋಳಿ ಸಾಕಾಣಿಕೆ ತರಬೇತಿ

» ದಾವಣಗೆರೆ

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ನಗರದ ಪಶು ಆಸ್ಪತ್ರೆ ಆವರಣದಲ್ಲಿರುವ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಸೆಪ್ಟೆಂಬರ್ 9 ಮತ್ತು 10 ರಂದು ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿಯನ್ನು ಆಯೋಜಿಸಲಾಗಿದೆ. ತರಬೇತಿಗೆ ಹಾಜರಾಗುವ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರ ಜೆರಾಕ್ಸ್ ತರಬೇಕು. ತರಬೇತಿಯಲ್ಲಿ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ ದಾವಣಗೆರೆ ದೂ. 08192-233787 ಗೆ ಸಂಪರ್ಕಿಸಬಹುದೆಂದು ಮುಖ್ಯ ಪಶು ವೈದ್ಯಾಧಿಕಾರಿಗಳು ತಿಳಿಸಿದ್ದಾರೆ

### ಆಕ್ಷೇಪಣೆ ಸಲ್ಲಿಸಲು ಅರ್ಜಿ

» ದಾವಣಗೆರೆ

ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದಡಿ, 15 ನೇ ಹಣಕಾಸು ಆಯೋಗ ಮತ್ತು ಪಿಎಂ-ಅಭಿಯಾನ ಕಾರ್ಯಕ್ರಮದಡಿಯಲ್ಲಿ ಗುತ್ತಿಗೆ ಆಧಾರಿತ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಬಹುದು. ಜಿಲ್ಲೆಯಲ್ಲಿ 2024-25 ಆರ್ಥಿಕ ವರ್ಷದಲ್ಲಿ ಅನುಮೋದನೆಯಾಗಿ ಖಾಲಿ ಇರುವ ಕಿ.ಆ.ಸಹಾಯಕರ ಹುದ್ದೆಗೆ ಆಗಸ್ಟ್ 17 ರಂದು ಕಚೇರಿಗೆ ಸ್ವೀಕೃತಿಯಾದ ಅರ್ಜಿಗಳಲ್ಲಿ, ರೋಸ್ಟರ್ ಹಾಗೂ ಮೆರಿಟ್ ಆಧಾರದ ಮೇಲೆ ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕು.ಕ.ಅಧಿಕಾರಿಗಳ ಕಚೇರಿ, ಎಸ್.ಎಸ್. ಹೈಟೆಲ್ ಆಸ್ಪತ್ರೆ ಹತ್ತಿರ, ಎನ್.ಸಿ.ಸಿ ಕ್ಯಾಂಪ್ ಪಟ್ಟಿ, ಶ್ರೀರಾಮ ನಗರ ರಸ್ತೆ, ದಾವಣಗೆರೆ-577005, ಇಲ್ಲಿನ ಸೂಚನಾ ಫಲಕದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಸೆ.6 ರಂದು ಪ್ರಕಟಿಸಲಾಗಿದ್ದು, ಈ ಪಟ್ಟಿಗೆ ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ ಲಿಖಿತವಾಗಿ ಸಮರ್ಥನೀಯ ಪುರಾವೆಗಳೊಂದಿಗೆ ಸೆ.20 ರೊಳಗಾಗಿ ಕಚೇರಿಗೆ ಸಲ್ಲಿಸಬೇಕೆಂದುರೇಣುಕಾರಾಧ್ಯ ತಿಳಿಸಿದ್ದಾರೆ.

### ಮೇಸನ್ ಕಿಟ್ ಹಾಗೂ ಟೂಲ್‌ಕಿಟ್ ವಿತರಣೆ

» ದಾವಣಗೆರೆ

ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ಸೆ.4 ರಂದು ಸಾಂಕೇತಿಕವಾಗಿ ಅರ್ಹ ಫಲಾನುಭವಿಗಳಿಗೆ 14 ಮೇಸನ್ ಕಿಟ್ ಗಳನ್ನು ಹಾಗೂ 5 ರೋಡ್ ಕನ್‌ಸ್ಟ್ರಕ್ಷನ್ ವರ್ಕರ್ಸ್ ಕಿಟ್‌ಗಳನ್ನು ಅರ್ಹ ಫಲಾನುಭವಿಗಳಿಗೆ ವಿತರಣೆ ಮಾಡುವುದರ ಮೂಲಕ ಕಿಟ್ ವಿತರಣೆಗೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಚಾಲನೆ ನೀಡಿದರು. ದಾವಣಗೆರೆ ಜಿಲ್ಲೆಗೆ 4900 ಮೇಸನ್ ಹಾಗೂ 1680 ರೋಡ್ ಕನ್‌ಸ್ಟ್ರಕ್ಷನ್ ಟೂಲ್ ಕಿಟ್‌ಗಳನ್ನು ಸರಬರಾಜು ಮಾಡಲಾಗಿದ್ದು ಸರಬರಾಜಾದ ಟೂಲ್‌ಕಿಟ್‌ಗಳನ್ನು ಕಾರ್ಮಿಕ ನಿರೀಕ್ಷಕರಿಗೆ ಮರುಹಂಚಿಕೆ ಮಾಡಲಾಗಿರುತ್ತದೆ. ಕಾರ್ಮಿಕ ಅಧಿಕಾರಿ ಬಿ.ಇಬ್ರಾಹಿಂ ಸಾಬ್, ಕಾರ್ಮಿಕ ನಿರೀಕ್ಷಕರುಗಳಾದ ರಾಜಶೇಖರ್ ಹಿರೇಮಠ್, ನಾಗೇಶ್ ಆರ್, ರಾಜಪ್ಪ ಟಿ, ದಾವಣಗೆರೆ ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕಾ, ಮಹಾನಗರ ಪಾಲಿಕೆ ಸದಸ್ಯರಾದ ಕೆ.ಚಮನ್ ಸಾಬ್, ಉದಯ್ ಕುಮಾರ್ ಹಾಗೂ ಕಾರ್ಮಿಕ ಇಲಾಖೆಯ ಸಿಬ್ಬಂಧಿಗಳು ಹಾಜರಿದ್ದರು.

### ಬಾಲಕಾರ್ಮಿಕ ಪದ್ಧತಿ ನಿಷೇಧ ತಪಾಸಣೆ

» ದಾವಣಗೆರೆ

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಆ.1 ರಿಂದ 30 ರವರೆಗೆ ಪ್ಯಾನ್ ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಆಂದೋಲನದ ಅಂಗವಾಗಿ ದಾವಣಗೆರೆ ಜಿಲ್ಲಾದ್ಯಂತ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಹಾಗೂ ಬಾಲ್ಯಾವಸ್ಥೆ & ಕಿಶೋರಾವಸ್ಥೆ (ನಿಷೇಧ ಮತ್ತು ನಿಯಂತ್ರಣ) ವಿವಿಧ ಅಂಗಡಿ, ಹೋಟೆಲ್, ಗ್ಯಾರೇಜ್ ಹಾಗೂ ವಾಣಿಜ್ಯ ಸಂಸ್ಥೆಗಳಿಗೆ ಭೇಟಿ ನೀಡಿ ಬಾಲ ಹಾಗೂ ಕಿಶೋರಾವಸ್ಥೆ ಕಾರ್ಮಿಕರ ತಪಾಸಣೆ ನಡೆಸಿ, ತಪಾಸಣೆಯಲ್ಲಿ ದಾವಣಗೆರೆ ನಗರದಲ್ಲಿ 4 ಹರಿಹರ ನಗರದಲ್ಲಿ 2 ಮಲೆಬೆನ್ನೂರುನಲ್ಲಿ 3 ಹೊನ್ನಾಳಿಯಲ್ಲಿ 2 ಅಪಾಯಕಾರಿ ಉದ್ದಿಮೆಯಲ್ಲಿ 9 ಅಪಾಯಕಾರಿಯಲ್ಲದ ಉದ್ದಿಮೆಯಲ್ಲಿ 2 ಒಟ್ಟು 11 ಕಿಶೋರ ಕಾರ್ಮಿಕರು ಪತ್ತೆಯಾಗಿದ್ದು, ಪತ್ತೆಯಾದ ಕಿಶೋರ ಕಾರ್ಮಿಕರನ್ನು ಕೆಲಸದಿಂದ ಬಿಡುಗಡೆಗೊಳಿಸಿ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರುಪಡಿಸಿ ಮಾಲೀಕರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಹಾಗೂ ಮಾಲೀಕರಿಗೆ ಕರಪತ್ರ & ಸ್ಟಿಕ್ಕರ್ಸ್ ನೀಡಿ ಜಾಗೃತಿ ಮೂಡಿಸಲಾಗಿದೆ. 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಕೆಲಸಕ್ಕೆ ಹಾಗೂ 15 ರಿಂದ 18 ವರ್ಷದೊಳಗಿನ ಕಿಶೋರ ಕಾರ್ಮಿಕರನ್ನು ಅಪಾಯಕಾರಿ ಉದ್ದಿಮೆಯಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವುದು ಕಾಯ್ದೆಯ ಉಲ್ಲಂಘನೆಯಾಗಿದ್ದು ತಪ್ಪಿತಸ್ಥ ಮಾಲೀಕರಿಗೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ ರೂ.20,000 ರಿಂದ ರೂ.50,000 ಗಳ ವರೆಗೆ ದಂಡ ಅಥವಾ ಎರಡನ್ನು ವಿಧಿಸಲು ಅವಕಾಶವಿರುತ್ತದೆಗಂಗಾಧರಸ್ವಾಮಿ ತಿಳಿಸಿದರು.

# ಶಿಕ್ಷಕರಿಲ್ಲದ ಸಮಾಜ ಊಹಿಸಲು ಅಸಾಧ್ಯ

## ಶಿಕ್ಷಕ ವೃತ್ತಿಯ ಮೂಲಕ ಉತ್ತಮ ಸಮಾಜ ರೂಪಿಸಲು ಮುಂದಾಗಿ; ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್

» ದಾವಣಗೆರೆ



ಶಿಕ್ಷಕರಿಲ್ಲದ ಸಮಾಜ ಊಹಿಸಲು ಅಸಾಧ್ಯ, ಮಕ್ಕಳನ್ನು ವಿದ್ಯಾವಂತರನ್ನಾಗಿಸಿ ಅವರ ಜವಾಬ್ದಾರಿಯನ್ನು ಹೆಚ್ಚಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವವಾದದು, ಆದ್ದರಿಂದ ಶಿಕ್ಷಕ ವೃತ್ತಿ ಕಾಪಾಡಿಕೊಂಡು ಉತ್ತಮ ಸಮಾಜ ರೂಪಿಸಲು ಮುಂದಾಗಿ ಎಂದು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ, ಇವರ ವತಿಯಿಂದ ನಗರದ ಬಾಪೂಜಿ ಬ್ಯಾಂಕ್ ಸಮುದಾಯ ಭವನದಲ್ಲಿ ಏರ್ಪಡಿಸಿದ್ದ ಡಾ. ಸರ್ವಪಲ್ಲಿ ರಾಧಾಕೃಷ್ಣನ್‌ರವರ ಜನ್ಮ ದಿನಾಚರಣೆ ಮತ್ತು ಶಿಕ್ಷಕರ ದಿನಾಚರಣೆ ಹಾಗೂ ನಿವೃತ್ತ ಶಿಕ್ಷಕರಿಗೆ ಮತ್ತು ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ನವಭಾರತ ನಿರ್ಮಾಣಕ್ಕೆ ಶಿಕ್ಷಕರ ಪಾತ್ರ ಅತ್ಯಂತ ಮುಖ್ಯವಾದ್ದರಿಂದ ಶಿಕ್ಷಕರು ಅಲೆಗ್ಸಾಡಂರ್‌ನಂತೆ ಜ್ಞಾನಯಾತ್ರೆ, ಅಬ್ದುಲ್ ಕಲಾಂರಂತೆ ಜ್ಞಾನದ ಕ್ಷಿಪಣಿಯನ್ನು ಹಾರಿಸಬೇಕು. ಹೊಸ ಹೊಸ ತಂತ್ರಜ್ಞಾನ, ವೈಜ್ಞಾನಿಕ ಸಂಶೋಧನೆಗಿಂತ ಒಬ್ಬ ವ್ಯಕ್ತಿಯ ವ್ಯಕ್ತಿತ್ವವನ್ನು ಬದಲಾಯಿಸುವುದು ಶ್ರೇಷ್ಠ, ಅಂತಹ ಕಾಯಕವೇ ಶಿಕ್ಷಕರ ವೃತ್ತಿಯಾಗಿದೆ ಅಭಿಪ್ರಾಯಪಟ್ಟರು. ಎಲ್ಲರ ಶ್ರಮದಿಂದ ಗುರುಗಳಿಗೆ ಹೆಚ್ಚಿನ ಮಾನ್ಯತೆ ಸಿಕ್ಕಿದೆ, ಈ ನಿಟ್ಟಿನಲ್ಲಿ ಶಿಕ್ಷಕರ ಪಾತ್ರ ಮಾದರಿಯಾಗಿದ್ದು ಮಾರ್ಗದರ್ಶಿ ಶಿಕ್ಷಕರಿಗೆ ಧನ್ಯವಾದ ಹೇಳುವ ಈ ಶಿಕ್ಷಕರ ದಿನವಾಗಿದೆ ಎಂದರು. ಮಹಿಳೆಯರಿಗೆ ಶಿಕ್ಷಣದ ಅಗತ್ಯ ಎಂದು ದೇಶಕ್ಕೆ ಸಾರಿದ ಮಾಹನ್ ಮಹಿಳೆ ಸಾವಿತ್ರಿ ಬಾಯಿಪುಲೆ ಹೋರಾಟ ಮಾಡಿ ಸ್ಥಾನಮಾನ ನೀಡಿದ್ದಾರೆ. ಕಿರಣ್ ಬೇಡಿ, ಡಾ.ವರ್ಗೀಸ್ ಕುರಿಯನ್ ಕೂಡ ಶಿಕ್ಷಕರು. ಇದೇ ಮಾದರಿಯಲ್ಲಿ ದೇಶ ಹಾಗೂ ಸಮಾಜಕ್ಕಾಗಿ ಸಾಕಷ್ಟು ಕೊಡುಗೆ ನೀಡಿದ ಬಹಳಷ್ಟು ಶಿಕ್ಷಕರಿದ್ದಾರೆ ಎಂದು ತಿಳಿಸಿ ತಮ್ಮ ಶಾಲಾ ದಿನಗಳನ್ನು ನೆನಪುಮಾಡಿಕೊಂಡು ಈಗಿನ ವಿದ್ಯಾರ್ಥಿಗಳು ಕ್ವಿಜ್ ಸೇರಿದಂತೆ ಎಲ್ಲಾ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು. ಶಿಕ್ಷಕರು ಶಾಲಾ ಅವಧಿಯಲ್ಲಿ ಅಷ್ಟೇ ಅಲ್ಲ, ಬಾಕಿ ವೇಳೆಯಲ್ಲೂ ಮಕ್ಕಳನ್ನು ತಿದ್ದುವ ಅವಶ್ಯಕತೆ ಇದೆ. ಇಂದು ತಂತ್ರಜ್ಞಾನ ಬದಲಾಗಿದ್ದು ಮೊಬೈಲ್‌ನಲ್ಲೇ ಎಲ್ಲಾ ಮಾಹಿತಿ ಸಿಗುತ್ತದೆ, ಮೊದಲೆಲ್ಲಾ ಎಲ್ಲಾ ಮಾಹಿತಿ ಪಡೆಯಲು ಗ್ರಂಥಾಲಯಕ್ಕೆ ಮೊರೆ ಹೊಗಬೇಕಾಗಿತ್ತು ಎಂದು ತಮ್ಮ ವಿದ್ಯಾರ್ಥಿಜೀವನದ ಮೆಲುಕು ಹಾಕಿದರು.

ಶಿಕ್ಷಕರಿಗಿರುವ ಎಲ್ಲಾ ಕೌಶಲ್ಯತೆ, ಜ್ಞಾನವನ್ನು ವಿದ್ಯಾರ್ಥಿಗಳಿಗೆ ಸಿಗುವಂತೆ ಮಾಡಬೇಕು. ಶಾಲೆಗಳಲ್ಲಿನ ಗ್ರಂಥಾಲಯದ ಪುಸ್ತಕ ಓದುವಂತೆ ಹಾಗೂ ದಿನಪತ್ರಿಕೆಗಳನ್ನು ಓದುವಂತೆ ಮಾಡಬೇಕು. ಇಂದಿನ ಮಕ್ಕಳು ಸಾಕಷ್ಟು ಬುದ್ದಿವಂತರಿದ್ದಾರೆ, ಅವರಿಗೆ ಸೂಕ್ತ ಮಾರ್ಗದರ್ಶನದ ಅಗತ್ಯವಿದೆ. ಬಡತನ, ಏಕ ಪೋಷಕತ್ವ ಮಕ್ಕಳನ್ನು ಪ್ರೋತ್ಸಾಹಿಸುವುದು, ಮಕ್ಕಳಲ್ಲಿರುವ ಪ್ರತಿಭೆ ಗುರುತಿಸುವುದು ಶಿಕ್ಷಕರಿಂದ ಮಾತ್ರ ಸಾಧ್ಯದಿದೆ. ಆ ದೊಡ್ಡ ಜವಾಬ್ದಾರಿ ಶಿಕ್ಷಕರ ಮೇಲೆ ಇದೆ ಎಂದರು. ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಮಾತನಾಡಿ ದೇಶಕ್ಕೆ ಉತ್ತಮ ಪ್ರಜೆಯನ್ನು ರೂಪಿಸುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ದೇಶ ಅಭಿವೃದ್ಧಿ ಪಥದಲ್ಲಿ ನಡೆಯಬೇಕಾದರೆ ನೀವು ಗುರು ಮಾತ್ರವಲ್ಲದೇ ಪ್ರತಿಯೊಬ್ಬ ವಿದ್ಯಾರ್ಥಿಗೂ ಮೊದಲು ಸ್ನೇಹಿತರಾಗಿ ಜಿಲ್ಲೆಯ ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಪೂರಕವಾಗಿ ಕಾರ್ಯನಿರ್ವಹಿಸುವ ಅವಶ್ಯಕತೆ ಇದೆ ಎಂದರು. ಮಕ್ಕಳ ಸರ್ವಾಂಗೀಣ ಬೆಳವಣಿಗೆಗಾಗಿ ಶಿಕ್ಷಕರು ಪಠ್ಯ ವಿಷಯದ ಜೊತೆಗೆ ಪಠ್ಯೇತರ ವಿಷಯಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಜಿಲ್ಲೆಯ ಮಕ್ಕಳನ್ನು ದೇಶಕ್ಕೆ ಕೀರ್ತಿ ತರುವ ನಿಟ್ಟಿನಲ್ಲಿ ತಯಾರು ಮಾಡಬೇಕು ಎಂದು ಸಲಹೆ ನೀಡಿದರು. ಜಿಲ್ಲೆ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ 20ನೇಸ್ಥಾನದಲ್ಲಿದ್ದು ಮುಂದಿನ ಈ ವರ್ಷ 5 ರೊಳಗೆ ತರಲಾಗುವುದು ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಆಧಿಕಾರಿ ಸುರೇಶ್ ಬಿ. ಇಟ್ನಾಳ್ ಮಾತನಾಡಿ ಕ್ರೀಡೆ, ಸಾಂಸ್ಕೃತಿಕತೆ ಹಾಗೂ ದೈಹಿಕ ಚಟುವಟಿಕೆ ಒಳಗೊಂಡು ಪಠ್ಯೇತರ ಚಟುವಟಿಕೆಯಲ್ಲಿ ತೊಡಗುವಂತೆ ಮಾರ್ಗದರ್ಶಕರಾಗಿ ಸುಂದರ ಭವಿಷ್ಯ ರೂಪಿಸಿಕೊಳ್ಳಲು ವಿದ್ಯಾರ್ಥಿಗಳನ್ನು ಪ್ರೇರೆಪಿಸಬೇಕು ಎಂದು ತಿಳಿಸಿದರು. ನಿವೃತ್ತ ಶಿಕ್ಷಕರುಗಳು ಬಹುತೇಕ ನಿವೃತಿ ಹೊಂದಿದ ಮೇಲೆ ತಮ್ಮ ಮನೆಯಲ್ಲೆ ಕಾಲಕಳೆಯುತ್ತಾರೆ, ಅಲ್ಲಿ ಕಳೆಯುವ ಸಮಯವನ್ನು ಯಾವ ಶಾಲೆಯಲ್ಲಿ ಶಿಕ್ಷಕರ ಸಂಖ್ಯೆ ಕಡಿಮೆ ಇದೆಯೋ ಅಂತಹ ಶಾಲೆಗಳಿಗೆ ಸ್ವಯಂ ಪ್ರೇರಿತರಾಗಿ ಬಂದು ಮಕ್ಕಳಿಗೆ ಮಾರ್ಗದರ್ಶನ ಹಾಗೂ ಕಲಿಕೆಗೆ ಹೆಚ್ಚು ಪ್ರೇತ್ಸಾಯಿಸಬೇಕೆಂದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೊಟ್ರೇಶ್ ಪ್ರಾಸ್ತಾವಿಕ ಮಾತನಾಡಿದರು. ಸಮಾರಂಭದಲ್ಲಿ ಕಿರಿಯ ಮತ್ತು ಹಿರಿಯ ಪ್ರಾಥಮಿಕ ಶಾಲಾ ವಿಭಾಗದಿಂದ 12 ಹಾಗೂ ಪ್ರೌಢಶಾಲಾ ವಿಭಾಗದಿಂದ 6 ಶಿಕ್ಷಕರು ಸೇರಿದಂತೆ ಒಟ್ಟು 18 ಶಿಕ್ಷಕರಿಗೆ ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಮತ್ತು ಮೂರು ದಶಕಗಳ ಕಾಲ ಕಾರ್ಯನಿರ್ವಹಿಸಿ ನಿವೃತ್ತರಾದ ಶಿಕ್ಷಕರನ್ನು ಇಲಾಖೆ ವತಿಯಿಂದ ಸನ್ಮಾನಿಸಲಾಯಿತು.

ಮಾಯಕೊಂಡ ಶಾಸಕರಾದ ಬಸವಂತಪ್ಪ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನಿರ್ದೇಶಕ ಎಸ್.ಗೀತಾ, ಉತ್ತರವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಶೇರ್‌ಅಲಿ, ದಕ್ಷಿಣ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪಾಲತಾ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ವೀರೇಶ್.ಎಸ್.ಒಡೇನಪುರ ಉಪಸ್ಥಿತರಿದ್ದರು.

# ವಸ್ತು ಪ್ರದರ್ಶನ ಅಮ್ಯೂಸ್‌ಮೆಂಟ್ ಪಾರ್ಕ್‌ಗೆ ಅನುಮತಿ ವಿರೋಧಿಸಿ ಜಿಲ್ಲಾಧಿಕಾರಿಗೆ ಮನವಿ

» ಚಿತ್ರದುರ್ಗ



ವಸ್ತು ಪ್ರದರ್ಶನ ಅಮ್ಯೂಸ್‌ಮೆಂಟ್ ಪಾರ್ಕ್ ನಡೆಸಲು ಅನಧಿಕೃತವಾಗಿ ಅನುಮತಿ ನೀಡಲು ಹೊರಟಿರುವುದನ್ನು ವಿರೋಧಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪರಿವರ್ತನಾ ವಾದದವರು ಜಿಲ್ಲಾಧಿಕಾರಿಗೆ ಗುರುವಾರ ಮನವಿ ಸಲ್ಲಿಸಿದರು.ಹಿರಿಯೂರು ಪಟ್ಟಣದ ನೆಹರು ಮೈದಾನದಲ್ಲಿ ಸೆ.1 ರಿಂದ ಅ. 10 ವರೆಗೆ ನಡೆಸಲು ಅನುಮತಿ ಕೋರಿ ಉಪ ವಿಭಾಗದಾಧಿಕಾರಿ, ಹಿರಿಯೂರು ತಹಶೀಲ್ದಾರ್, ವಿದ್ಯುತ್ ಪರಿವೀಕ್ಷಕರು, ಬೆಸ್ಕಾಂ, ಹಿರಿಯೂರು ಲೋಕೋಪಯೋಗಿ ಇಲಾಖೆಯಿಂದ ಅನುಮತಿ ನೀಡಿದ್ದು, ಪೊಲೀಸರು ಹಾಗೂ ಅಗ್ನಿಶಾಮಕ ದಳದವರು ಪರಿಶೀಲನೆ ನಡೆಸುತ್ತಿದ್ದಾರೆ. ಹಿರಿಯೂರು ನಗರಸಭೆ ಅಧ್ಯಕ್ಷರು ಮತ್ತು ಆಯುಕ್ತರು ಸೇರಿಕೊಂಡು ಈ ಹಿಂದೆ ಅರ್ಜಿ ನೀಡಿ ಆರು ಇಲಾಖೆಗಳಿಂದ ಅನುಮತಿ ಪಡೆದಿರುವ ಸಂಸ್ಥೆಗೆ ಅನುಮತಿ ನೀಡದೆ ಗುರು ಎಂಟರ್ ಪ್ರೈಸಸ್‌ನವರು ನಿನ್ನೆ ನೀಡಿರುವ ಅರ್ಜಿಯನ್ನು ಪರಿಗಣಿಸಿ ಅನುಮತಿ ನೀಡಲು ಮುಂದಾಗಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಯವರಲ್ಲಿ ಒತ್ತಾಯಿಸಿದರು.ಕರ್ನಾಟಕ ದಲಿತ ಸಂಘರ್ಷ ಸಮಿತಿ ಪರಿವರ್ತನಾ ವಾದದ ಜಿಲ್ಲಾ ಪ್ರಧಾನ ಸಂಚಾಲಕ ಕೆ.ಮಂಜುನಾಥ್‌ಹೆಗ್ಗೆರೆ, ಟಿ.ಗೋವಿಂದಪ್ಪ, ಜಿಲ್ಲಾ ಸಂಘಟನಾ ಸಂಚಾಲಕ ಟಿ.ಮಂಜುನಾಥ್, ಕಣುಮಪ್ಪ ಭರಮಗಿರಿ, ಸೂರನಹಳ್ಳಿ ಮಂಜುನಾಥ್ ಇನ್ನು ಅನೇಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಮಾಯಾವತಿ ವಿರುದ್ಧ ಬೇಸತ್ತು ಬಿಎಸ್‌ಪಿಗೆ ಸಾಮೂಹಿಕ ರಾಜಿನಾಮೆ



» ಚಿತ್ರದುರ್ಗ

ಪರಿಶಿಷ್ಟ ಜಾತಿಯಲ್ಲಿನ ಒಳ ಪಂಗಡಗಳಿಗೆ ಒಳ ಮೀಸಲಾತಿ ನೀಡುವ ಅಧಿಕಾರ ಆಯಾ ರಾಜ್ಯಗಳಿಗಿದೆ ಎಂದು ಸುಪ್ರೀಂಕೋರ್ಟ್ ನೀಡಿರುವ ತೀರ್ಪು ಸರಿಯಿಲ್ಲವೆಂದಿರುವ ಬಿಎಸ್ಪಿ. ರಾಷ್ಟ್ರೀಯ ಅಧ್ಯಕ್ಷೆ ಮಾಯಾವತಿ ವಿರುದ್ಧ ಬೇಸತ್ತು ಜಿಲ್ಲಾ ಬಿಎಸ್‌ಪಿ.ಯ ಸಮಿತಿಯ ಎಲ್ಲರೂ ಸಾಮೂಹಿಕವಾಗಿ ರಾಜಿನಾಮೆ ನೀಡಿದ್ದೇವೆಂದು ಬಹುಜನ ಸಮಾಜ ಪಾರ್ಟಿಯ ಜಿಲ್ಲಾಧ್ಯಕ್ಷ ಎನ್.ಪ್ರಕಾಶ್ ತಿಳಿಸಿದರು.

ಪ್ರವಾಸಿ ಮಂದಿರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಸುಪ್ರೀಂಕೋರ್ಟ್‌ನ ಮಹತ್ತರ ತೀರ್ಪನ್ನು ವಿರೋಧಿಸಿರುವ ಮಾಯಾವತಿಯವರ ಹೇಳಿಕೆ ವಿರುದ್ಧ ಬೇಸತ್ತು ರಾಜ್ಯಾಧ್ಯಕ್ಷರಿಗೆ ರಾಜಿನಾಮೆ ಸಲ್ಲಿಸಿದ್ದು, ಕರ್ನಾಟಕದಲ್ಲಿ ಬಹುಜನ ಸಮಾಜ ಪಾರ್ಟಿಯನ್ನು ಪುನರ್ ರಚಿಸುತ್ತೇವೆ. ರಾಜ್ಯಾಧ್ಯಕ್ಷ ಮಾಯಸಂದ್ರ ಮುನಿಯಪ್ಪರವರು ಕೂಡ ಈಗಾಗಲೆ ರಾಜೀನಾಮೆ ನೀಡಿದ್ದಾರೆ. ರಾಜ್ಯದಿಂದ ಐವರು ನಾಯಕರು ಅಹವಾಲು ಸಲ್ಲಿಸಲು ಹೋದಾಗ ಸೌಜನ್ಯಕ್ಕಾದರೂ ಮಾತನಾಡಿಸದೆ ಅವಮಾನ ಮಾಡಿರುವುದರ ವಿರುದ್ಧ ಹದಿನಾಲ್ಕು ಪುಟಗಳ ಪತ್ರ ಬರೆದಿದ್ದೇವೆ. ನಮಗೆ ಅಸಮಾಧಾನವಿರುವುದರಿಂದ ಕರ್ನಾಟಕ ಬಹುಜನ ಪಾರ್ಟಿಯನ್ನು ಕಟ್ಟುತ್ತೇವೆಂದು ಎನ್.ಪ್ರಕಾಶ್ ಹೇಳಿದರು.ಬಿಎಸ್‌ಪಿ. ಜಿಲ್ಲಾ ಸಂಯೋಜಕ ಕೆ.ಎನ್.ದೊಡ್ಡೊಟ್ಟೆಪ್ಪ, ಸಂಯೋಜಕ ಶಿವಮೂರ್ತಿ, ಪ್ರಧಾನ ಕಾರ್ಯದರ್ಶಿ ಹನುಮಂತರಾಯ, ಕಾರ್ಯದರ್ಶಿಗಳಾದ ಶ್ರೀನಿವಾಸ್‌ಎಂ.ಜಗದೀಶ್, ಲಕ್ಷ್ಮಕ್ಕ, ರಾಘವೇಂದ್ರ, ಮಹಾಲಿಂಗಪ್ಪ, ಚಂದ್ರಣ್ಣ, ರಂಗಸ್ವಾಮಿ, ನರಸಿಂಹಮೂರ್ತಿ, ಗುರುಸ್ವಾಮಿ, ಗೋವಿಂದಪ್ಪ, ರಾಜೇಶ್ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.




ಮಹಿಳೆಯರ ಮೇಲೆ ನಡೆಯುತ್ತಿರುವ ಅತ್ಯಾಚಾರ ಕೊಲೆ ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ಕನ್ನಡ ಸೇನೆಯಿಂದ ಪ್ರತಿಭಟನೆ.

## ಪ್ರಮುಖ ಸುದ್ದಿ

# ಹೊಳಲ್ಕೆರೆ ಸಂವಿಧಾನ ಸೌಧದಲ್ಲಿ ಶಿಕ್ಷಕರ ದಿನಾಚರಣೆ

» ಹೊಳಲ್ಕೆರೆ



ಸಮಾಜದಲ್ಲಿನ ಅಂಕು ಡೊಂಕುಗಳನ್ನು ತಿದ್ದಿ ಸದೃಢ ಸಮಾಜ ಕಟ್ಟುವ ಹೊಣೆಗಾರಿಕೆ ನಿಮ್ಮ ಮೇಲಿದೆ ಎಂದು ಶಾಸಕ ಡಾ.ಎಂ. ಚಂದ್ರಪ್ಪ ಶಿಕ್ಷಕರುಗಳಿಗೆ ಕರೆ ನೀಡಿದರು.

ರಾಜ್ಯ ಸರ್ಕಾರಿ ನೌಕರರ ಸಂಘ ತಾಲ್ಲೂಕು ಶಾಖೆ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಪ್ರೌಢಶಾಲಾ ಸಹ ಶಿಕ್ಷಕರ ಸಂಘ ಹಾಗೂ ಮುಖ್ಯ ಶಿಕ್ಷಕರ ಸಂಘ, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಪಟ್ಟಣದ ಸಂವಿಧಾನ ಸೌಧದಲ್ಲಿ ಗುರುವಾರ ನಡೆದ ಶಿಕ್ಷಕರ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ಡಾ.ಸರ್ವಪಲ್ಲಿ ರಾಧಾಕೃಷ್ಣನ್‌ರವರು ಶಿಕ್ಷಕ ವೃತ್ತಿಯಿಂದ ರಾಷ್ಟ್ರಪತಿ ಹುದ್ದೆಗೇರಿದರು. ಅವರ ಜನ್ಮದಿನಾಚರಣೆಯನ್ನು ಶಿಕ್ಷಕರ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ನಿಮ್ಮ ಜವಾಬ್ದಾರಿಯನ್ನು ಅರ್ಥಮಾಡಿಕೊಂಡು ಶಾಲೆಗೆ ಬರುವ ಮಕ್ಕಳನ್ನು ನಿಮ್ಮ ಸ್ವಂತ ಮಕ್ಕಳಂತೆ ನೋಡಿಕೊಂಡು ಪಾಠ ಹೇಳಿಕೊಡಿ. ಮನೆಯಲ್ಲಿ ಮಕ್ಕಳ ಲಾಲನೆ ಪಾಲನೆ ಮಾಡುವ ತಾಯಿಯೆ ಮೊದಲ ಗುರು. ಪರಮ ಪವಿತ್ರವಾದ ಶಿಕ್ಷಕ ವೃತ್ತಿಗೆ ಚ್ಯುತಿ ಬರದಂತೆ ಕೆಲಸ ಮಾಡಿ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಏಳನೆ ವೇತನ ಆಯೋಗಕ್ಕೆ ಒಪ್ಪಿಕೊಂಡಿದ್ದಾರೆ. ಗ್ರಾಮೀಣ ಭಾಗದಿಂದ ಬರುವ ಬಡ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗಬಾರದೆಂದು ಸ್ವಂತ ಖರ್ಚಿನಲ್ಲಿ ಬಸ್‌ಗಳ ವ್ಯವಸ್ಥೆ ಕಲ್ಪಿಸಿ ಚಾಲಕ, ಕಂಡಕ್ಟರ್‌ಗೆ ಸಂಬಳ ಕೊಡುತ್ತಿದ್ದೇನೆ. ರಾಜ್ಯದಲ್ಲಿ ಯಾವ ಶಾಸಕನು ಇಂತಹ ಕೆಲಸ ಮಾಡಿಲ್ಲ. 1994 ರಲ್ಲಿ ಭರಮಸಾಗರದಿಂದ ಗೆದ್ದು ಶಾಸಕನಾದಾಗ ಕ್ಷೇತ್ರದಲ್ಲಿ ಎಲ್ಲಿಯೂ ಸಂಚರಿಸಲು ರಸ್ತೆಗಳಿರಲಿಲ್ಲ. ಐದು ವರ್ಷಗಳಲ್ಲಿ 383 ಹಳ್ಳಿಗಳಲ್ಲಿ ಗುಣ ಮಟ್ಟದ ರಸ್ತೆ ನಿರ್ಮಿಸಿದ್ದರಿಂದ ಕ್ಷೇತ್ರದ ಮತದಾರರು ರಸ್ತೆ ರಾಜ ಎಂಬ ಬಿರುದು ನೀಡಿ ಎರಡನೆ ಬಾರಿಗೂ ನನ್ನನ್ನು ಗೆಲ್ಲಿಸಿದರು. ಸಾರ್ವಜನಿಕರ ಬದುಕನ್ನು ಅರ್ಥಮಾಡಿಕೊಂಡು ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆ. ಅದೇ ರೀತಿ ನಿಮಗೆ ಸಿಕ್ಕಿರುವ ಅವಕಾಶವನ್ನು ಸಾರ್ವಜನಿಕರಿಗೆ ಧಾರೆ ಎರೆಯಬೇಕೆಂದು ಡಾ.ಎಂ.ಚಂದ್ರಪ್ಪ ತಿಳಿಸಿದರು.

ತಹಶೀಲ್ದಾರ್ ಶ್ರೀಮತಿ ಬೀಬಿ ಫಾತಿಮ, ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಶ್ರೀನಿವಾಸ್, ಪುರಸಭೆ ಸದಸ್ಯರುಗಳಾದ ಪಿ.ಆರ್. ಮಲ್ಲಿಕಾರ್ಜುನ್, ಸುಧಾ ಬಸವರಾಜ್, ಬಿ.ಎಸ್.ರುದ್ರಪ್ಪ, ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಲೋಕೇಶ್, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎನ್.ಶಿವಮೂರ್ತಿ, ಡಾ. ಹೆಚ್. ಜಿ. ಉಮಾಪತಿ, ಡಾ.ಹೆಚ್.ಬಿ.ಮಂಜುನಾಥ್, ಬಿ.ಬಸಪ್ಪ ಮತ್ತು ಗ್ಯಾರೆಂಟಿ ಅನುಷ್ಠಾನ ಸಮಿತಿ ಸದಸ್ಯರುಗಳು, ನಿವೃತ್ತ ಶಿಕ್ಷಕರುಗಳು ಹಾಗೂ ತಾಲ್ಲೂಕಿನ ಎಲ್ಲಾ ಶಿಕ್ಷಕರುಗಳು ಶಿಕ್ಷಕರ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.

ನಿವೃತ್ತ ಶಿಕ್ಷಕರು ಮತ್ತು ಉತ್ತಮ ಶಿಕ್ಷಕರುಗಳನ್ನು ಸನ್ಮಾನಿಸಲಾಯಿತು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T